ವಿಜಯಪುರ | ಸಂಪುಟ 04 | ಸಂಚಿಕೆ 137 | ಪುಟ 04 | ₹ 3.00

https://udayarashminews.com

udayarashmi 90088 88340

# ಉದಯ ರಶ್ಮಿ

Udayarashmi Kannada Daily

ಜನಪರ-ಜೀವಪರ

ಕನ್ನಡ ದಿನಪತ್ರಿಕೆ

ಸಂಪಾದಕ : ಇಂದುಶೇಖರ ಮಣೂರ

Editor: Indushekhar Manur

editor.udayarashmi@gmail.com RNI NO: KARKAN/2023/86203 ಮಂಗಳವಾರ, ಜುಲೈ, 21, 2026


"ಇತ್ತೀಚೆಗೆ ಹೆಚ್ಚಾಗಿರುವ ಅನಧಿಕೃತ ಪತ್ರಕರ್ತರು, ಅನಧಿಕೃತ ಯೂಟ್ಯೂಬ್ ಹಾವಳಿ ನಿಲ್ಲಬೇಕಿದೆ. ಕೆಲವೊಂದು ಯೂಟ್ಯೂಬ್ ಗಳು ಪತ್ರಿಕೋದ್ಯಮದ ನೈತಿಕತೆಯಿಲ್ಲದೆ ವರದಿಗಳನ್ನು ಮಾಡಿ ಹಾವಳಿ ಮಾಡುತ್ತಿವೆ. ಈ ಕುರಿತು ನಾನು ಕೇಂದ್ರ ವಾರ್ತಾ ಸಚಿವರಿಗೆ ಪತ್ರ ಬರೆದಿದ್ದೇನೆ."



■ ಬಸನಗೌಡ ಪಾಟೀಲ ಯತ್ನಾಳ
ವಿಜಯಪುರ ನಗರ ಶಾಸಕರು

# ದೇಶದ ಅಭಿವೃದ್ಧಿಗೆ ಮಾಧ್ಯಮಗಳ ಕೊಡುಗೆ ಅಪಾರ

## ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾ ಘಟಕದಿಂದ ಪತ್ರಿಕಾ ದಿನಾಚರಣೆ | ಪತ್ರಕರ್ತರ ಮಕ್ಕಳ ಪ್ರತಿಭಾ ಪುರಸ್ಕಾರ | ವಾರ್ಷಿಕ ಪ್ರಶಸ್ತಿ ಪ್ರದಾನ | ಶಾಸಕ ಬಸನಗೌಡ ಪಾಟೀಲ ಯತ್ನಾಳ ಅಭಿಮತ







■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಪತ್ರಿಕೆ ಹಾಗೂ ಮಾಧ್ಯಮಗಳ ಜವಾಬ್ದಾರಿ ಬಹಳ ದೊಡ್ಡದಿದ್ದು, ಅನ್ಯಾಯವಾದಾಗ ನ್ಯಾಯದ ಪರವಾಗಿ ಬೆಳಕಿಗೆ ತರುವ ಕೆಲಸ ಪತ್ರಕರ್ತರು ಮಾಡುತ್ತಾರೆ. ರಾಜ್ಯಕ್ಕಾಗಿ, ದೇಶಕ್ಕಾಗಿ, ನ್ಯಾಯ, ನೀತಿಯ ಪರವಾಗಿ ಪತ್ರಕರ್ತರ ಪೆನ್ನು ಓಡಬೇಕು. ಬಡವರ ಪರವಾಗಿ, ಅನ್ಯಾಯಕ್ಕೊಳಗಾದವರ ಪರವಾಗಿ ಪತ್ರಕರ್ತರು ಕೆಲಸ ಮಾಡಬೇಕು ಎಂದು ಶಾಸಕ ಬಸನಗೌಡ ಪಾಟೀಲ ಯತ್ನಾಳ ಸಲಹೆ ನೀಡಿದರು.

### ರೂ.5 ಲಕ್ಷ ದೇಣಿಗೆ ಘೋಷಿಸಿದ ಕಟಕದೊಂಡ



ಇದೇ ವೇಳೆ ಕಾನಿಪ ಸಂಘದ ಅಭಿವೃದ್ಧಿಗೆ ರೂ. 5 ಲಕ್ಷ ದೇಣಿಗೆ ನೀಡುವುದಾಗಿ ಶಾಸಕ ವಿಠ್ಠಲ ಕಟಕದೊಂಡ ವಾಗ್ದಾನ ಮಾಡಿದರು. ಶಾಸಕ ಬಸನಗೌಡ ಪಾಟೀಲ ಯತ್ನಾಳ ಅವರು ತಮ್ಮ ಭಾಷಣದ ಮಧ್ಯೆ ಶಾಸಕ ವಿಠ್ಠಲ ಕಟಕದೊಂಡ ಅವರ ಅನುಮತಿ ಪಡೆದು ರೂ. 5 ಲಕ್ಷ ದೇಣಿಗೆ ಘೋಷಿಸಿದಾಗ ಸಭಾಂಗಣದಲ್ಲಿದ್ದ ಎಲ್ಲ ಪತ್ರಕರ್ತರು ಭಾರಿ ಕರತಾಡನ ಮೂಲಕ ಸಂತಸ, ಅಭಿಮಾನ ವ್ಯಕ್ತಪಡಿಸಿದರು.

ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾ ಘಟಕದಿಂದ ನಗರದ ಕಂದಗಲ್ಲ ಶ್ರೀ ಹನುಮಂತರಾಯ ರಂಗಮಂದಿರದಲ್ಲಿ ನಡೆದ ಪತ್ರಿಕಾ ದಿನಾಚರಣೆ-2026 ಪತ್ರಕರ್ತರ ಮಕ್ಕಳ ಪ್ರತಿಭಾ ಪುರಸ್ಕಾರ ಹಾಗೂ ವಾರ್ಷಿಕ ಪ್ರಶಸ್ತಿ ಪ್ರದಾನ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದ ಅವರು, ಸದಾ ಒತ್ತಡದಲ್ಲಿರುವ ಪತ್ರಕರ್ತರು



"ದೇಶದಲ್ಲಿನ ಬಹುದೊಡ್ಡ ಹಗರಣಗಳು ಹೊರಬರಲು ಮಾಧ್ಯಮಗಳೇ ಪ್ರಮುಖ ಕಾರಣವಾಗಿವೆ. ದೇಶದ ಅಭಿವೃದ್ಧಿಯಲ್ಲಿ ಮಾಧ್ಯಮಗಳು ಅತಿದೊಡ್ಡ ಕೊಡುಗೆ ನೀಡಿವೆ. ಮಾಧ್ಯಮಗಳು ಸತ್ಯವನ್ನು ಬರೆದರೆ ಮಾತ್ರ ಆ ದೇಶ ಉಳಿಯಲು ಸಾಧ್ಯ."

■ ಬಸನಗೌಡ ಪಾಟೀಲ ಯತ್ನಾಳ
ವಿಜಯಪುರ ನಗರ ಶಾಸಕರು

ವರ್ಷಕ್ಕೊಮ್ಮೆಯಾದರೂ ಒಂದೆಡೆ ಸೇರಬೇಕು. ಹಣವುಳ್ಳವರು, ದಬ್ಬಾಳಿಕೆ ಮಾಡುವವರ ಕುರಿತು ಬಯಲಿಗೆಳೆಯುವ ಕೆಲಸವನ್ನು ಪತ್ರಕರ್ತರು ಮಾಡುತ್ತಿದ್ದಾರೆ. ಓರ್ವ ರಾಜಕಾರಣಿಯ ತಪ್ಪು ಬೆಳಕಿಗೆ ಪತ್ರಕರ್ತರು ತಂದಾಗ ದೊಡ್ಡ ದೊಡ್ಡ ರಾಜಕಾರಣಿಗಳು ರಾಜೀನಾಮೆ ನೀಡಿದ್ದಾರೆ. ಯಾವುದೇ ಒಂದು ಮಾಧ್ಯಮದಲ್ಲಿ ವರದಿ ಬಂದರೆ ಅದು ಸತ್ಯ ಎಂದು ಜನರು ನಂಬುತ್ತಾರೆ, ಹಾಗಾಗಿ ವರದಿಗಳು ಪಾರದರ್ಶಕವಾಗಿರಬೇಕು ಎಂದು ಶಾಸಕ ಯತ್ನಾಳ ಹೇಳಿದರು.

ಪತ್ರಕರ್ತರ ಮಕ್ಕಳಿಗೆ ಪ್ರತಿಭಾ ಪುರಸ್ಕಾರ ನೀಡಿದ ನಾಗಠಾಣ ಶಾಸಕ ವಿಠ್ಠಲ ಕಟಕದೊಂಡ ಮಾತನಾಡಿ, ಪ್ರಜಾಪ್ರಭುತ್ವದ ಸರ್ಕಾರ ಇದ್ದಲ್ಲಿ ಪತ್ರಿಕೋದ್ಯಮ ಬಹಳ ಪ್ರಮುಖವಾಗಿದೆ. ಸತ್ಯದ ಪ್ರತಿಪ್ರಾದಕವಾಗಿ ಪತ್ರಿಕಾರಂಗ ಕೆಲಸ ಮಾಡುತ್ತಿದೆ. ವಿಜಯಪುರದ ಡಾ.ಫ.ಗು.ಹಳಕಟ್ಟಿಯವರು ಆಗಿನ ದಿನದಲ್ಲಿ ತಮ್ಮ ಮನೆಯನ್ನು ಮಾರಿ ಪತ್ರಿಕೆ ತೆರೆಯುವ ಮೂಲಕ ಸಾಮಾಜಿಕ ಸೇವೆ ಮಾಡುವವರಿಗೆ ಸ್ಪೂರ್ತಿ ನೀಡಿದ್ದರು. ಪತ್ರಕರ್ತರು ಯಾವುದೇ ಘಟನೆ ಜರುಗಿದಾಗ ಅದನ್ನು ಎರಡೂ ಬದಿಯಿಂದ ತನಿಖೆ ನಡೆಸಿ ವಾಸ್ತವದ ವರದಿಯನ್ನು ಮಾಡಬೇಕು. ಈ ಮೂಲಕ ವಿಜಯಪುರದ ಗೋಳಗುಮ್ಮಟದಂತೆ ಎತ್ತರಕ್ಕೆ ಬೆಳೆಯಬೇಕು ಎಂದು ಶುಭ ಹಾರೈಸಿದರು.

ಕಾನಿಪ ರಾಜ್ಯ ಪ್ರಧಾನ ಕಾರ್ಯದರ್ಶಿ ಜಿ.ಸಿ.ಲೋಕೇಶ ಮಾತನಾಡಿ, ಸಂಘದ ರಾಜ್ಯ ಘಟಕದ ಅಭಿವೃದ್ಧಿ ಕಾರ್ಯಗಳ ಕುರಿತು ವಿವರಿಸಿದರು.


ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಸಂಘದ ಜಿಲ್ಲಾಧ್ಯಕ್ಷ ಅಶೋಕ ಯಡಳ್ಳಿ, ಸಂಘದ ಬೆಳವಣಿಗೆಗಳ ಕುರಿತು ವಿವರಿಸಿದರು.

ಅತಿಥಿಗಳಾಗಿ ಮಹಾನಗರ ಪಾಲಿಕೆ ಮೇಯರ್ ಎಂ.ಎಸ್.ಕರಡಿ, ವಿಡಿಎ ಅಧ್ಯಕ್ಷ ಡಾ.ಗಂಗಾಧರ ಸಂಬಣ್ಣಿ, ಮಹಾನಗರ ಪಾಲಿಕೆ ಉಪ-ಆಯುಕ್ತ ಮಹಾವೀರ ಬೋರಣ್ಣವರ ಆಗಮಿಸಿದ್ದರು.



"ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲೆಯ ಸರ್ವ ಸದಸ್ಯರ ಆರೋಗ್ಯ ತಪಾಸಣೆ, ಜಿಲ್ಲಾ ಸಂಘದ ಕಟ್ಟಡ ಪುನಶ್ಚೇತನ, ಎಲ್ಲ ಸದಸ್ಯರಿಗೆ ಗುಂಪು ವಿಮೆ ಮಾಡುವ ವಿಚಾರ ಸೇರಿದಂತೆ ಸಂಘದ ಅಭಿವೃದ್ಧಿಗಾಗಿ ಎಲ್ಲ ಸದಸ್ಯರು ಸಲಹೆ-ಸಹಕಾರ ನೀಡಬೇಕು."

■ ಅಶೋಕ ಯಡಳ್ಳಿ
ಜಿಲ್ಲಾಧ್ಯಕ್ಷರು
ಕಾರ್ಯನಿರತ ಪತ್ರಕರ್ತರ ಸಂಘ, ವಿಜಯಪುರ



"ಸಂಘದ ಬೆಳವಣಿಗೆಗೆ ನಾವೆಲ್ಲ ಪದಾಧಿಕಾರಿಗಳು ಪ್ರಾಮಾಣಿಕವಾಗಿ ಶ್ರಮಿಸುತ್ತಿದ್ದು, ಸಂಘದ ಲೆಕ್ಕಪತ್ರಗಳನ್ನು ಪಾರದರ್ಶಕವಾಗಿಡಲಾಗಿದೆ. ಸಂಘದ ಸದಸ್ಯರ ಹಿತರಕ್ಷಣೆಯನ್ನು ಗಮನದಲ್ಲಿಟ್ಟುಕೊಂಡು ಆರೋಗ್ಯ ವಿಮೆ ಸೇರಿಂದಂತೆ ಹಲವು ಯೋಜನೆಗಳನ್ನು ರೂಪಿಸಿದ್ದು, ಆ ದಿಸೆಯಲ್ಲಿ ನಾವು ಕಾರ್ಯೋನ್ಮುಖರಾಗಿದ್ದೇವೆ."

■ ಇಂದುಶೇಖರ ಮಣೂರ
ಜಿಲ್ಲಾ ಪ್ರಧಾನ ಕಾರ್ಯದರ್ಶಿ
ಕಾರ್ಯನಿರತ ಪತ್ರಕರ್ತರ ಸಂಘ, ವಿಜಯಪುರ

ಅತಿಥಿಗಳಾಗಿ ರಾಜ್ಯ ಕಾರ್ಯದರ್ಶಿ ಪುಂಡಲೀಕ ಬಾಳೋಜಿ, ರಾಜ್ಯ ಕಾರ್ಯಕಾರಿಣಿ ಸದಸ್ಯ ಮಲ್ಲಿಕಾರ್ಜುನರೆಡ್ಡಿ ಗೊಂಡಿ ಆಗಮಿಸಿದ್ದರು.

ಜಿಲ್ಲಾ ಪ್ರಧಾನ ಕಾರ್ಯದರ್ಶಿ ಇಂದುಶೇಖರ ಮಣೂರ ವಾರ್ಷಿಕ ವರದಿ ಓದಿದರು.

ಪತ್ರಿಕಾ ದಿನಾಚರಣೆಯಲ್ಲಿ ಕಾನಿಪ ಜಿಲ್ಲಾ ಪದಾಧಿಕಾರಿಗಳು, ಕಾರ್ಯಕಾರಿಣಿ ಸಮಿತಿ ಸದಸ್ಯರು, ಸಲಹಾ ಸಮಿತಿ ಸದಸ್ಯರು, ಹಿರಿಯ ಪತ್ರಕರ್ತರು, ಸರ್ವ ಸದಸ್ಯರು, ಭಾಗವಹಿಸಿದ್ದರು.

ರಾಜ್ಯ ಕಾರ್ಯಕಾರಿಣಿ ಸಮಿತಿ ಸದಸ್ಯ ಪ್ರಕಾಶ ಬೆಣ್ಣೂರ ಸ್ವಾಗತಿಸಿದರು. ಮಂಜುಳಾ ಹಿಪ್ಪರಗಿ ಪ್ರಾರ್ಥಿಸಿದರು. ಸಂಗೀತಾ ಮಠಪತಿ ನಿರೂಪಿಸಿದರು. ಕಾನಿಪ ಜಿಲ್ಲಾ ಉಪಾಧ್ಯಕ್ಷ ಶಶಿಕಾಂತ ಮೆಂಡೆಗಾರ ವಂದಿಸಿದರು.

# ಮತದಾರರ ಮ್ಯಾಪಿಂಗ್ ಶೇ.77.68 ಪೂರ್ಣ : ಮೆಕ್ಕಳಕಿ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ನಗರ ಮತಕ್ಷೇತ್ರದಲ್ಲಿ 2,90,479 ಮತದಾರರಿದ್ದು, ಈ ಪೈಕಿ 2,63,211 ಮತದಾರರಿಗೆ ಗಣತಿ ನಮೂನೆಗಳನ್ನು ವಿತರಿಸಲಾಗಿದೆ ಎಂದು ಮತದಾರರ ನೋಂದಣಿ ಅಧಿಕಾರಿ ವಿಜಯ ಮೆಕ್ಕಳಕಿ ತಿಳಿಸಿದ್ದಾರೆ.

ಗಣತಿ ಕಾರ್ಯಕ್ಕೆ ಸಂಬಂಧಿಸಿದಂತೆ ಶೇ.77.68 ರಷ್ಟು ಮತದಾರರು ಮ್ಯಾಪ್ ಪ್ರಕ್ರಿಯೆಗೆ ಒಳಪಟ್ಟಿದ್ದಾರೆ. ಮನೆ ಮನೆ ಭೇಟಿ ಹಾಗೂ ಆನ್ ಲೈನ್ ಮೂಲಕ ಸಲ್ಲಿಕೆಯಾಗುತ್ತಿರುವ ಅರ್ಜಿಗಳ ಡಿಜಿಟಲೀಕರಣ ಪ್ರಕ್ರಿಯೆಯು ಚುರುಕಾಗಿ ನಡೆದಿದೆ ಎಂದವರು ತಿಳಿಸಿದ್ದಾರೆ.

ಒಟ್ಟು 1,25,955 ಗಣತಿ ನಮೂನೆಗಳನ್ನು ಡಿಜಿಟಲೀಕರಣಗೊಳಿಸಲಾಗಿದೆ. ಆನ್‌ಲೈನ್ ನಲ್ಲಿ 2,274 ಮತದಾರರು ಸಲ್ಲಿಸಿದ್ದಾರೆ. 1,880 ಮತದಾರರು ಮರಣ ಹೊಂದಿದ್ದನ್ನು ದೃಢಪಡಿಸಲಾಗಿದೆ. ಹೊಸಾಗಿ 1,892 ಮತದಾರರು ನೋಂದಾಯಿಸಿಕೊಂಡಿದ್ದಾರೆ.1,116 ಮತದಾರರು ಶಾಶ್ವತವಾಗಿ ಸ್ಥಳಾಂತರಗೊಂಡಿದ್ದಾರೆ. 44 ಗೈರುಹಾಜರಾದ ಮತದಾರರು ಹಾಗೂ 94 ಇತರೆ ಎಂದವರು ತಿಳಿಸಿದ್ದಾರೆ.

# ಅಭಿವೃದ್ಧಿ ಕಾಮಗಾರಿಗೆ 47.50 ಕೋಟಿ ರೂ. ಮಂಜೂರು



■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: 2026-27 ನೇ ಸಾಲಿನಲ್ಲಿ ವಿಜಯಪುರ ನಗರಾಭಿವೃದ್ಧಿ ಪ್ರಾಧಿಕಾರದಿಂದ ಕೈಗೊಳ್ಳುವ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ 47.50 ಕೋಟಿ ರೂ. ಮಂಜೂರಾತಿ ನೀಡಲಾಯಿತು.

ನಗರಾಭಿವೃದ್ಧಿ ಪ್ರಾಧಿಕಾರದ ಕಚೇರಿ ಸಭಾಂಗಣದಲ್ಲಿ ನಡೆದ ಸಾಮಾನ್ಯ ಸಭೆಯಲ್ಲಿ ಈ ನಿರ್ಣಯ ಕೈಗೊಳ್ಳಲಾಯಿತು.

ಪ್ರಮುಖವಾಗಿ, ಮಹಾತ್ಮಾ ಗಾಂಧಿಜೀ ವೃತ್ತ ಅಭಿವೃದ್ಧಿ, ಸರೋವರ (ಕೆರೆ)ಪುನಶ್ಚೇತನ ಕಾಮಗಾರಿ, ನಗರದ ಸಂಚಾರ ಸುವ್ಯವಸ್ಥೆಗೆ ಪ್ರಮುಖ ವೃತ್ತಗಳಲ್ಲಿ ಸಿಗ್ನಲ್ ದೀಪಗಳ ಅಳವಡಿಕೆ, ನಗರದ ವಿವಿಧ ಭಾಗಗಳಲ್ಲಿ ಸ್ಮಶಾನಗಳ ಅಭಿವೃದ್ಧಿ, ಪ್ರಮುಖ ರಸ್ತೆಗಳಲ್ಲಿ ಯೋಜನಾ ಬದ್ಧವಾಗಿ ಬಸ್ ಶೆಲ್ಟರ್ ಗಳ ನಿರ್ಮಾಣ, ನಗರದ ವಿವಿಧ ಭಾಗಗಳಲ್ಲಿ ಉದ್ಯಾನವನಗಳ ಅಭಿವೃದ್ಧಿ ಕಾಮಗಾರಿಗಳು, 5 ಕೋಟಿ ರೂ. ಮೊತ್ತವನ್ನು ಕೋಟೆ ಗೋಡೆಯ ಸುತ್ತಲೂ ಇರುವ ಕಂದಕ ಅಭಿವೃದ್ಧಿ ಕಾಮಗಾರಿ, ನಗರದ ಕೆಲವು ಭಾಗಗಳಲ್ಲಿ ಮೇಲ್ಮಟ್ಟದ ಜಲ ಸಂಗ್ರಹಗಾರ ಹಾಗೂ ಇತರೆ ಕಾಮಗಾರಿಗಳನ್ನು ಒಳಗೊಂಡು ಅಂದಾಜು 47.50 ಕೋಟಿ ರೂ. ಗಳಲ್ಲಿ ಕಾಮಗಾರಿ ಕೈಕೊಳ್ಳಲು ಮಂಜೂರಾತಿ ನೀಡಿ ನಿಯಮಾನುಸಾರ ಕ್ರಮ ಅನುಸರಿಸಲು ಅಧಿಕಾರಿಗಳಿಗೆ ಸಭೆ ಸೂಚಿಸಿತು.

ಇದೇ ಸಂದರ್ಭದಲ್ಲಿ ಪ್ರಾಧಿಕಾರದ ಸಹಾಯಕ ನಿರ್ದೇಶಕರಾದ ಲಕ್ಷ್ಮಣ ಮೋರೆ, ಸಂಗಪ್ಪ ಯಾದವಾಡ, ದ್ವಿ.ದ.ಸ ಅವರ ಸೇವಾ ನಿವೃತ್ತಿ ಹಿನ್ನೆಲೆಯಲ್ಲಿ ಸನ್ಮಾನಿಸಲಾಯಿತು.

ಸಭೆಯಲ್ಲಿ ನಗರ ಶಾಸಕರಾದ ಬಸನಗೌಡ ಪಾಟೀಲ ಯತ್ನಾಳ, ವಿಠ್ಠಲ ಕಟಕದೊಂಡ, ಸುನೀಲಗೌಡ ಪಾಟೀಲ, ಜಿಲ್ಲಾಧಿಕಾರಿಗಳಾದ ಆನಂದ. ಕೆ, ಪ್ರಾಧಿಕಾರದ ಅಧ್ಯಕ್ಷರಾದ ಡಾ. ಗಂಗಾಧರ ಸಂಬಣ್ಣಿ, ಸದಸ್ಯರಾದ ಸಲೀಮ ಪೀರಜಾದೆ, ಸಂತೋಷ ಪವಾರ, ಮಹಾದೇವ ರಾಠೋಡ, ಕಾಶಿಬಾಯಿ ಹಡಪದ, ಪ್ರಾಧಿಕಾರದ ಆಯುಕ್ತರಾದ ರಾಜಶೇಖರ ಡಂಬಳ, ಮಹಾನಗರಪಾಲಿಕೆ ಆಯುಕ್ತರಾದ ವಿಜಯ ಮೆಕ್ಕಳಕಿ ಹಾಗೂ ಪ್ರಾಧಿಕಾರದ ಅಧಿಕಾರಿ ಹಾಗೂ ಸಿಬ್ಬಂದಿ ಪಾಲ್ಗೊಂಡಿದ್ದರು.

# ಭೀಮಾನದಿಗೆ ನೀರು ಹರಿಸಲು ಆಗ್ರಹಿಸಿ ಕರವೇ ಮನವಿ

■ ಉದಯರಶ್ಮಿ ದಿನಪತ್ರಿಕೆ




ಇಂಡಿ: ಭೀಮಾನದಿಯ ದಡದಲ್ಲಿ ಒಟ್ಟು 164 ಹಳ್ಳಿಗಳು 10 ನಗರಗಳು ಲಕ್ಷಾಂತರ ಜನ ಮತ್ತು ಜಾನುವಾರು ಭೀಮಾ ನೀರನ್ನು ನಂಬಿಕೊಂಡು ಬದುಕುತ್ತಿದ್ದಾರೆ. ಹೀಗಾಗಿ ಕೂಡಲೆ ಭೀಮಾನದಿಗೆ ನೀರು ಹರಿಸುವ ಕಾರ್ಯವನ್ನು ರಾಜ್ಯ ಸರಕಾರ ಮಾಡಬೇಕೆಂದು ಕರವೇ ಕಾರ್ಯಕರ್ತರು ಕಂದಾಯ ಉಪವಿಭಾಗಾಧಿಕಾರಿಗಳ ಮುಖಾಂತರ ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಕರವೇ ಅಧ್ಯಕ್ಷ ಬಾಳು ಮುಳಜಿ ಹಾಗೂ ಮುಖಂಡರು, ಈ ಬಾರಿ ಭೀಕರ ಬರಗಾಲ ಆವರಿಸಿದೆ. ಭೀಮಾನದಿ ನೀರನ್ನೆ ನಂಬಿಕೊಂಡಿರುವ ಇಂಡಿ ಚಡಚಣ, ಆಲಮೇಲ, ಸಿಂದಗಿ ತಾಲೂಕಿನ ರೈತರಿಗೆ ಸಮಸ್ಯೆ ಆಗುವ ಹಂತದಲ್ಲಿದೆ, ಮತ್ತೊಂದೆಡೆ ಜನ ಹಾಗೂ ಜಾನುವಾರುಗಳಿಗೆ ಕುಡಿಯುವ ನೀರಿನ ತತ್ವಾರವೂ ಏರ್ಪಟ್ಟಿದೆ. ಆದ್ದರಿಂದ ಭೀಮಾನದಿಗೆ ಕಾನೂನಾತ್ಮಕವಾಗಿ ಬರಬೇಕಿರುವ ನೀರಿನ ಪಾಲನ್ನು ಪಡೆಯುವ ನಿಟ್ಟಿನಲ್ಲಿ ನೆರೆಯ ಮಹಾರಾಷ್ಟ್ರ ರಾಜ್ಯ ಸರಕಾರದ ಮೇಲೆ ಒತ್ತಡ ಹೇರುವ ತುರ್ತು ಅಗತ್ಯವಿದೆ ಎಂದರು.

ನ್ಯಾಯಮೂರ್ತಿ ಬಚಾವತ್ ಅಧ್ಯಕ್ಷತೆಯ ಕೃಷ್ಣಾ ಜಲ ವಿವಾದ ನ್ಯಾಯಾಧಿಕರಣ ಪೀಠದ ಭೀಮಾನದಿಯ ನೀರು ಹಂಚಿಕೆಯ ಎಲ್ಲಾ ನಿಯಮಗಳನ್ನು ಉಲ್ಲಂಘನೆ ಮಾಡಲಾಗುತ್ತಿದೆ. ದುರಂತವೆಂದರೆ ಮಳೆಗಾಲ ದಿನಗಳಲ್ಲಿ ನದಿ ಬತ್ತಿ ಹೋಗುತ್ತಿದ್ದರೂ ಕರ್ನಾಟಕ ಸರಕಾರ ಈ ಭಾಗದ ಜನ ಪ್ರತಿನಿಧಿಗಳು ದಿವ್ಯ ನಿರ್ಲಕ್ಷ ವಹಿಸುತ್ತಿದ್ದಾರೆ. ಕೂಡಲೆ ನೀರು ಹರಿಸಲು ಕ್ರಮ ವಹಿಸದೇ ಹೋದರೆ ನಮ್ಮ ಭಾಗದ ಸರಿಸುಮಾರು 10 ಸಾವಿರ ರೈತರೊಂದಿಗೆ ಇಂಡಿ ಬಂದ್ ಮಾಡಿ ಉಗ್ರ ಹೋರಾಟ ಮಾಡಲಾಗುವುದು ಎಂದು ಎಚ್ಚರಿಸಿದರು.

ಮಹೇಶ ಹೂಗಾರ, ರಾಮಸಿಂಗ ಕನ್ನೊಳ್ಳಿ, ವಿಠ್ಠಲ ಸೊನ್ನ, ರಾಜು ಪವಾರ, ಪ್ರೇಮ ಕಾಲೇಬಾಗ, ಅಪ್ಪು ಚಂಡಕೆ, ತೇಜಸ್ ದೊಡ್ಡಮನಿ, ನಾಗರಾಜ ಲಾಳಸೇರಿ, ಬಾಗು ಹೊಸಮನಿ, ಶ್ರೀಧರ ವಡ್ಡಿ, ಪರಶುರಾಮ ಬಂಡಾರಿ ಸೇರಿದಂತೆ ಇನ್ನಿತರರು ಇದ್ದರು.

# ಹಿಂದುಳಿದ ತಾಲೂಕುಗಳ ಸಮಗ್ರ ಅಭಿವೃದ್ಧಿಗೆ ಆದ್ಯತೆ ನೀಡಿ

## ವಿಜಯಪುರದಲ್ಲಿ ನಡೆದ ಪ್ರಗತಿ ಪರಿಶೀಲನಾ ಸಭೆಯಲ್ಲಿ ಜಿಪಂ ಸಿಇಓ ರಿಷಿ ಆನಂದ್ ಅಧಿಕಾರಿಗಳಿಗೆ ಸೂಚನೆ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಜಿಲ್ಲೆಯ ಸಮಗ್ರ ಅಭಿವೃದ್ಧಿಗೆ ಮಾನವ ಅಭಿವೃದ್ಧಿ ಸೂಚ್ಯಂಕಗಳೇ ಪ್ರಮುಖ ಮಾನದಂಡವಾಗಿದ್ದು, ಅಭಿವೃದ್ಧಿಯಲ್ಲಿ ಹಿಂದುಳಿದಿರುವ ತಾಲೂಕುಗಳ ದತ್ತಾಂಶ ಸಂಗ್ರಹ ಸ್ಪಷ್ಟವಾಗಿ ನಿಖರವಾಗಿರಬೇಕು ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ರಿಷಿ ಆನಂದ ಅವರು ತಿಳಿಸಿದ್ದಾರೆ.

ಇಲ್ಲಿನ ಜಿಲ್ಲಾ ಪಂಚಾಯತಿ ಸಭಾಂಗಣದಲ್ಲಿ ಜಿಲ್ಲಾಡಳಿತ ಹಾಗೂ ಜಿಲ್ಲಾ ಪಂಚಾಯತಿ ಸಹಯೋಗದಲ್ಲಿ ಸೋಮವಾರ ಆಯೋಜಿಸಲಾಗಿದ್ದ ಜಿಲ್ಲಾ ಮಾನವ ಅಭಿವೃದ್ಧಿ ವರದಿ-2025 ಹಾಗೂ ಸಮಗ್ರ ಮತ್ತು ಸುಸ್ಥಿರ ಅಭಿವೃದ್ಧಿ ಯೋಜನೆ- 2031 ವರದಿಗಳ ತಯಾರಿಕೆ ಕುರಿತ ದತ್ತಾಂಶಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಯ ಪ್ರತಿಯೊಂದು ತಾಲೂಕಿನ ಪರಿಸ್ಥಿತಿಯೂ ವಿಭಿನ್ನವಾಗಿದ್ದು, ಕೆಲ ತಾಲೂಕುಗಳು ಶಿಕ್ಷಣ, ಆರೋಗ್ಯ, ಪೌಷ್ಟಿಕತೆ ಹಾಗೂ ಮೂಲಸೌಲಭ್ಯಗಳಲ್ಲಿ ಕೊರತೆ ಇರಬಹುದು.

ಇಂತಹ ದತ್ತಾಂಶಗಳ ಕಡೆಗೆ ಗಮನ ಹರಿಸಬೇಕು ನೀಡುವ ದತ್ತಾಂಶಗಳ ಆಧರಾದ ಮೇಲೆ ಸಮಗ್ರ ವಿಶ್ಲೇಷಣೆ ನಡೆಸಿ ಅಂತಹ ಕ್ಷೇತ್ರಗಳನ್ನು ಗುರುತಿಸಿ ವಿಶೇಷ ಕಾರ್ಯಯೋಜನೆ ರೂಪಿಸಲು ಸಹಾಯವಾಗಲಿದೆ ಎಂದು ಸಿಇಒ ವಿವರಿಸಿದರು.



ಪೌಷ್ಟಿಕ ಆಹಾರ ಹಾಗೂ ಸೂಕ್ತ ಆರೋಗ್ಯ ಸೇವೆ ಒದಗಿಸಲು ಸಂಬಂಧಿಸಿದ ಇಲಾಖೆಗಳು ಸಮನ್ವಯತೆಯಿಂದ ದತ್ತಾಂಶ ಕ್ರೋಡಿಕರಿಸಿ ದಾಖಲಿಸಬೇಕು ಎಂದು ಅವರು ನಿರ್ದೇಶನ ನೀಡಿದರು.

ಇದೇ ವೇಳೆ ಮಾತನಾಡಿದ ಯೋಜನಾ ಇಲಾಖೆಯ ಹಿರಿಯ ನಿರ್ದೇಶಕರು ಬಸವರಾಜ ಎಸ್. ಅವರು, ಎಲ್ಲಾ ಇಲಾಖೆಗಳು ಮಾನವ ಅಭಿವೃದ್ಧಿಗೆ ಸಂಬಂಧಿಸಿದ ನಿಖರ ಮಾಹಿತಿಯನ್ನು ಕಾಲಮಿತಿಯೊಳಗೆ ಸಲ್ಲಿಸಬೇಕು ಎಂದು ಅವರು ಸೂಚಿಸಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯತಿಯ ಮುಖ್ಯ ಯೋಜನಾಧಿಕಾರಿ ಸಿ.ಬಿ. ಕುಂಬಾರ, ಕರ್ನಾಟಕ ರಾಜ್ಯ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯದ ಪ್ರೊ. ಡಿ.ಎಂ. ಮದರಿ ಹಾಗೂ ವಿವಿಧ ಇಲಾಖೆಗಳ ಜಿಲ್ಲಾಮಟ್ಟದ ಅಧಿಕಾರಿಗಳು ಮತ್ತು ಸಿಬ್ಬಂದಿ ಉಪಸ್ಥಿತರಿದ್ದರು.

# ಶೇ.77.68 ರಷ್ಟು ಮತದಾರರ ಮ್ಯಾಪಿಂಗ್ ಪೂರ್ಣ

## 2,61,349 ಮತದಾರರಿಗೆ ಗಣತಿ ನಮೂನೆ ವಿತರಣೆ।

## ಮತದಾರರ ನೋಂದಣಿ ಅಧಿಕಾರಿ ವಿಜಯ ಮೆಕ್ಕಳಕಿ ಹೇಳಿಕೆ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ನಗರ ಮತಕ್ಷೇತ್ರದಲ್ಲಿ 2,90,479 ಮತದಾರರಿದ್ದು, ಈ ಪೈಕಿ 2,61,349 ಮತದಾರರಿಗೆ ಗಣತಿ ನಮೂನೆಗಳನ್ನು ವಿತರಿಸಲಾಗಿದೆ ಎಂದು ಮತದಾರರ ನೋಂದಣಿ ಅಧಿಕಾರಿ ವಿಜಯ ಮೆಕ್ಕಳಕಿ ತಿಳಿಸಿದ್ದಾರೆ.

ಗಣತಿ ಕಾರ್ಯಕ್ಕೆ ಸಂಬಂಧಿಸಿದಂತೆ ಶೇ.77.68 ರಷ್ಟು ಮತದಾರರು ಮ್ಯಾಪ್ ಪ್ರಕ್ರಿಯೆಗೆ ಒಳಪಟ್ಟಿದ್ದಾರೆ. ಮನೆ ಮನೆ ಭೇಟಿ ಹಾಗೂ ಆನ್ ಲೈನ್ ಮೂಲಕ ಸಲ್ಲಿಕೆಯಾಗುತ್ತಿರುವ ಅರ್ಜಿಗಳ ಡಿಜಿಟಲೀಕರಣ ಪ್ರಕ್ರಿಯೆಯು ಚುರುಕಾಗಿ ನಡೆದಿದೆ ಎಂದವರು ತಿಳಿಸಿದ್ದಾರೆ.

ಒಟ್ಟು 1,15,338 ಗಣತಿ ನಮೂನೆಗಳನ್ನು ಡಿಜಿಟಲೀಕರಣಗೊಳಿಸಲಾಗಿದೆ. ಆನ್‌ಲೈನ್ ನಲ್ಲಿ 2,236 ಮತದಾರರು ಸಲ್ಲಿಸಿದ್ದಾರೆ. 1,557 ಮತದಾರರು ಮರಣ ಹೊಂದಿದ್ದನ್ನು ದೃಢಪಡಿಸಲಾಗಿದೆ. ಹೊಸಾಗಿ 1,548 ಮತದಾರರು ನೋಂದಾಯಿಸಿಕೊಂಡಿದ್ದಾರೆ.

934 ಮತದಾರರು ಶಾಶ್ವತವಾಗಿ ಸ್ಥಳಾಂತರಗೊಂಡಿದ್ದಾರೆ ಹಾಗೂ 89 ಇತರೆ ಎಂದವರು ತಿಳಿಸಿದ್ದಾರೆ.

ಎಸ್ ಐಆರ್ ಕಾರ್ಯಕ್ಕೆ ಮತದಾರರು ತಮ್ಮ ವಿವರಗಳನ್ನು ಸರಿಯಾಗಿ ಪರಿಶೀಲಿಸಿಕೊಂಡು, ಈ ಪ್ರಕ್ರಿಯೆಗೆ ಸಂಪೂರ್ಣ ಸಹಕಾರ ನೀಡಬೇಕು ಎಂದವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕಳಪೆ ಕಾಮಗಾರಿ ವಿರುದ್ಧ ಎಂ.ಎಸ್. ಪಾಟೀಲ ನರಿಬೋಳ ಆಕ್ರೋಶ



ಕಲಬುರಗಿ: ನಗರದ ಅಟಲ್ ಬಿಹಾರಿ ವಾಜಪೇಯಿ ಬಡಾವಣೆಯಲ್ಲಿರುವ, ಸಮಾಜ ಕಲ್ಯಾಣ ಇಲಾಖೆಯ ವ್ಯಾಪ್ತಿಗೆ ಒಳಪಡುವ ನೈಸ್ ಅಕಾಡೆಮಿ (ಪ್ರಬುದ್ಧ ಅಕಾಡೆಮಿ) ಕಟ್ಟಡ ನಿರ್ಮಾಣದಲ್ಲಿ ಕಳಪೆ ಗುಣಮಟ್ಟದ ಕಾಮಗಾರಿ ನಡೆದಿರುವುದನ್ನು ಖಂಡಿಸಿ ಹಾಗೂ ಸಂಬಂಧಪಟ್ಟ ಅಧಿಕಾರಿಗಳನ್ನು ಸೇವೆಯಿಂದ ಖಾಯಂ ಆಗಿ ವಜಾಗೊಳಿಸುವಂತೆ ಆಗ್ರಹಿಸಿ ಕಲ್ಯಾಣ ಕರ್ನಾಟಕ ಪ್ರತ್ಯೇಕ ರಾಜ್ಯ ಹೋರಾಟ ಸಮಿತಿ ಅದ್ಯಕ್ಷ ಎಂ.ಎಸ್. ಪಾಟೀಲ ನರಿಬೋಳ ಅವರು ಕರ್ನಾಟಕ ಗ್ರಾಮೀಣ ಮೂಲಸೌಕರ್ಯ ಅಭಿವೃದ್ಧಿ ನಿಯಮಿತದ ವ್ಯವಸ್ಥಾಪಕ ನಿರ್ದೇಶಕರಿಗೆ ದೂರು ಸಲ್ಲಿಸಿದ್ದಾರೆ.

ಕಲಬುರಗಿ–1 ರ ಕೆಆರ್‌ಐಡಿಎಲ ಸಹಾಯಕ ಕಾರ್ಯಪಾಲಕ ಅಭಿಯಂತರರು ಹಾಗೂ ಕಾರ್ಯಪಾಲಕ ಅಭಿಯಂತರರ (ಪ್ರಭಾರ) ಆಗಿರುವ ಸೌರಭ್ ಎಸ್. ಭೀಮನ್ ಅವರು ಸೇರಿ ಹಲವು ಅಧಿಕಾರಿಗಳು ಗುತ್ತಿಗೆದಾರರು ಕರ್ತವ್ಯದಲ್ಲಿ ತೀವ್ರ ನಿರ್ಲಕ್ಷ್ಯ ವಹಿಸಿರುವುದು ಸಾಬೀತಾದ ಹಿನ್ನೆಲೆಯಲ್ಲಿ, ಕಳೆದ ಮಾರ್ಚ್ 2, ರಂದು ಅವರನ್ನು ಅಮಾನತುಗೊಳಿಸಿ ಆದೇಶ ಹೊರಡಿಸಲಾಗಿ–ತ್ತು. ಆದರೆ, ಅಮಾನತುಗೊಂಡ ಕೇವಲ ಒಂದು ತಿಂಗಳೊಳಗಾಗಿ ಈ ಅಧಿಕಾರಿಯನ್ನು ಮತ್ತೆ ಸೇವೆಗೆ ಮರುನೇಮಕ ಮಾಡಿಕೊಂಡಿರುವುದು ಇತರ ಅಧಿಕಾರಿಗಳ ಕುರಿತು ಕ್ರಮ ಕೈಗೊಳ್ಳದಿರುವದು ಸಾರ್ವಜನಿಕ ವಲಯದಲ್ಲಿ ತೀವ್ರ ಆಕ್ರೋಶಕ್ಕೆ ಕಾರಣವಾಗಿದೆ.ಕಟ್ಟಡದ ಭೀಕರ ಸ್ಥಿತಿ:

ಅಧಿಕೃತ ಪರಿಶೀಲನಾ ವರದಿಗಳು ಮತ್ತು ತಾಂತ್ರಿಕ ಪರೀಕ್ಷೆಗಳ ಪ್ರಕಾರ ಕಟ್ಟಡದ ಸ್ಥಿತಿ ಅತ್ಯಂತ ಅಪಾಯಕಾ–ರಿಯಾಗಿದೆ.ಆರ್.ಸಿ.ಸಿ. ರೂಫ್ ಸ್ಲ್ಯಾಬಗೆ ಸರಿಯಾಗಿ ಹ್ಯಾಕಿಂಗ್ ಮಾಡದ ಕಾರಣ ಮೇಲ್ಭಾವಣಿಯ ಪ್ಲಾಸ್ಟರ್ ಸಂಪೂರ್ಣವಾಗಿ ಕಿತ್ತು ಬಿದ್ದಿದೆ. ರಿಬೌಂಡ್ ಹ್ಯಾಮರ್ ತಾಂತ್ರಿಕ ಪರೀಕ್ಷೆಯಲ್ಲಿ ಕಟ್ಟಡದ ಸರಾಸರಿ ಸಾಮರ್ಥ್ಯವು ಅತ್ಯಂತ ಕಳಪೆಯಾಗಿ ಕಂಡುಬಂದಿದೆ. ಪ್ರಸ್ತುತ ಕಟ್ಟಡದ ಪಾರ್ಕಿಂಗ್ ಶೆಡ್ ಈಗಾಗಲೇ ಕುಸಿದು ಬಿದ್ದಿದ್ದು, ಇಡೀ ಕಟ್ಟಡವೇ ಧರಶಾಹಿಯಾಗುವ ಭೀತಿಯಲ್ಲಿದೆ. ಇದು ಸಾರ್ವಜನಿಕರ ಹಾಗೂ ವಿದ್ಯಾರ್ಥಿಗಳ ಜೀವಕ್ಕೆ ತೀವ್ರ ಅಪಾಯವನ್ನು ಒಡ್ಡುತ್ತಿದೆ.

ಕಳಂಕಿತ ಅಧಿಕಾರಿ ಸೌರಭ್ ಎಸ್. ಭೀಮನ್ ಅವರನ್ನು ಕೇವಲ ತಾತ್ಕಾಲಿಕ ಅಮಾನತು ಮಾಡುವ ಬದಲಾಗಿ, ತಕ್ಷಣವೇ ಸೇವೆಯಿಂದ ಖಾಯಂ ಆಗಿ ವಜಾಗೊಳಿಸಬೇಕು. ಗುತ್ತಿಗೆದಾರರು ಮತ್ತು ಸಂಬಂಧಪಟ್ಟ ವಿಭಾಗವನ್ನು ಆರ್ಥಿಕವಾಗಿ ಹೊಣೆಗಾರರನ್ನಾಗಿ ಮಾಡಿ, ಅವರ ವೆಚ್ಚದಲ್ಲೇ ಕಟ್ಟಡವನ್ನು ಸುರಕ್ಷಿತವಾಗಿ ಪುನರ್ನಿರ್ಮಿಸಬೇಕು.

ಭ್ರಷ್ಟ ಮತ್ತು ಕಳಂಕಿತ ಅಧಿಕಾರಿಯನ್ನು ಸೇವೆಯಿಂದ ವಜಾಗೊಳಿಸಲು ತಕ್ಷಣವೇ ಕ್ರಮ ಕೈಗೊಳ್ಳದಿದ್ದರೆ, ಕೆಆರ್‌ಐ–ಡಿಎಲ್ ಕಚೇರಿಯ ಮುಂಭಾಗದಲ್ಲೇ ಅನಿರ್ದಿಷ್ಟಾವಧಿ ಧರಣಿ ಸತ್ಯಾಗ್ರಹ ಹಮ್ಮಿಕೊಳ್ಳಲಾಗುವುದು" ಎಂದು ಎಂ.ಎಸ್. ಪಾಟೀಲ ನರಿಬೋಳ ಅವರು ತೀವ್ರ ಎಚ್ಚರಿಕೆ ನೀಡಿದ್ದಾರೆ.

# ಜೈಲಿನಿಂದ ಪರಾರಿಯಾಗಿದ್ದ ಮತ್ತೊಬ್ಬ ಕೈದಿ ಬಂಧನ



ಕಲಬುರಗಿ: ನಗರ ಹೊರವಲಯದಲ್ಲಿರುವ ಕಲಬುರಗಿ ಕೇಂದ್ರ ಕಾರಾಗೃಹದಿಂದ ಜು.14 ರಂದು ಪರಾರಿಯಾಗಿದ್ದ ಸಜಾ ಕೈದಿ ಸಾಗರ್ ಭೀಮರಾಯ ಹೊಸಮನಿ (26)ಯನ್ನು ಭಾಲ್ಕಿ ಬಸ್ ನಿಲ್ದಾಣದ ಸಮೀಪ ಶನಿವಾರ ಸಂಜೆ ಬಂಧಿಸಲಾಗಿದೆ ಎಂದು ಪೊಲೀಸ್ ಮೂಲಗಳು ತಿಳಿಸಿವೆ.

ಬೇರೆ ಬೇರೆ ಪ್ರಕರಣಗಳಲ್ಲಿ ಶಿಕ್ಷೆಗೆ ಗುರಿಯಾಗಿದ್ದ ಬೀದರ್ ಜಿಲ್ಲೆಯ ಸಂತೋಷ ಬಸಪ್ಪ, ಮಸ್ತಾನ್ ಮಾಣಿಕಪ್ಪ ಹಾಗೂ ಸಾಗರ ಭೀಮರಾಯ ಹೊಸಮನಿ ಜು.14ರ ನಸುಕಿನಜಾವ ಜೈಲಿನಿಂದ ಪರಾ–ರಿಯಾಗಿದ್ದರು. ಜೈಲಿನಿಂದ ಪರಾರಿಯಾಗಿದ್ದ ಕೈದಿಗಳ ಪತ್ತೆಗೆ ಕಲಬುರಗಿ ಮತ್ತು ಬೀದರ್ ಜಿಲ್ಲೆಯ ಪೊಲೀಸ್ ತಂಡಗಳು ತೀವ್ರ ಶೋಧಕಾರ್ಯ ಆರಂಭಿಸಿದ್ದವು. ಬುಧವಾರ ನಗರದ ಕೈಗಾರಿಕಾ ಪ್ರದೇಶದಲ್ಲಿ ಸಂತೋಷ ಬಸಪ್ಪನನ್ನು ಪೊಲೀಸರು ಬಂಧಿಸಿದ್ದರು. ಇನ್ನುಳಿದ ಇಬ್ಬರ ಕೈದಿಗಳ ಪತ್ತೆಗೆ ಪೊಲೀಸರು ತೀವ್ರ ಶೋಧ ನಡೆಸಿದ್ದರು. ಸಾಗರ್ ಭಾಲ್ಕಿ ಕಡೆಗೆ ಬರುತ್ತಿದ್ದಾನೆ ಎಂಬ ಖಚಿತ ಮಾಹಿತಿ ದೊರೆದೊರೆತ ಹಿನ್ನೆಲೆಯಲ್ಲಿ ಪೊಲೀಸರು ಮುಂಜಾನೆಯಿಂದಲೇ ಬಲೆ ಬೀಸಿದ್ದರು. ಸಂಜೆ ವೇಳೆಗೆ ಆತನನ್ನು ಬಂಧಿಸಿದ್ದಾರೆ ಎಂದು ತಿಳಿದು ಬಂದಿದೆ.

ಭಾಲ್ಕಿ ನಗರ ಪೊಲೀಸ್ ಠಾಣೆಯ ಪೇದೆ ಮಹೇಶ್, ಧನ್ನೂರು ಪೊಲೀಸ್ ಠಾಣೆಯ ಪೇದೆ ಹರ್ಷವರ್ಧನ್ ಹಾಗೂ ಡಿಎ–ಆರ್ ಪೊಲೀಸ್ ಪೇದೆ ಮಹಾದೇವ ಹೀರೆಮಠ್ ಕಾರ್ಯಾಚರಣೆಯಲ್ಲಿ ಭಾಗವಹಿಸಿ ಕೈದಿಯನ್ನು ಬಂಧಿಸಿದ್ದಾರೆ.

ಘಟನೆ ಹಿನ್ನೆಲೆ: ಕಲಬುರಗಿ ಕೇಂದ್ರ ಕಾರಾಗೃಹದಿಂದ ಜುಲೈ 14ರ ನಸುಕಿನಜಾವ ಸಜಾ ಕೈದಿಗಳಾದ ಸಾಗರ್, ಸಂತೋಷ್ ಹಾಗೂ ಮಸ್ತಾನ್ ಎಂಬ ಮೂವರು ಪರಾರಿಯಾಗಿದ್ದರು. ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಸಂತೋಷನನ್ನು ಈಗಾಗಲೇ ಬಂಧಿಸಲಾಗಿದ್ದು, ಇದೀಗ ಸಾಗರ್ ಕೂಡ ಪೊಲೀಸರ ಬಲೆಗೆ ಬಿದ್ದಿದ್ದಾನೆ. ಪರಾ–ರಿಯಾಗಿರುವ ಮೂರನೇ ಕೈದಿ ಮಸ್ತಾನ್ ಪತ್ತೆಗೆ ವ್ಯಾಪಕ ಶೋಧ ಕಾರ್ಯ ಮುಂದುವರಿಸಲಾಗಿದೆ ಎಂದು ಪೊಲೀಸ್ ಮೂಲಗಳು ತಿಳಿಸಿವೆ.



# ನ್ಯೂ ಎಂಎಎಂ ಇಂಟರ್‌ನ್ಯಾಷನಲ್ ಸ್ಕೂಲನಲ್ಲಿ ರಸ್ತೆ ಸುರಕ್ಷತೆ ಕುರಿತು ಜಾಗೃತಿ

**ಕಲಬುರಗಿ:**ನಗರದ ನ್ಯೂ ಎಂ.ಎ.ಎಂ. ಇಂಟರ್‌ನ್ಯಾಷನಲ್ ಪಬ್ಲಿಕ್ ಸ್ಕೂಲ್ ವತಿಯಿಂದ ವಿದ್ಯಾರ್ಥಿಗಳು ಮತ್ತು ಪೋಷಕರಲ್ಲಿ ರಸ್ತೆ ಸುರಕ್ಷತೆ ಕುರಿತು ಜಾಗೃತಿ ಮೂಡಿಸುವ ಉದ್ದೇಶದಿಂದ ಸಂಚಾರ ನಿಯಮಗಳು ಮತ್ತು ಉಲ್ಲಂಘನೆ ಜಾಗೃತಿ ಕಾರ್ಯಕ್ರಮವನ್ನು ಆಯೋಜಿಸಲಾಯಿತು.

ಕಾರ್ಯಕ್ರಮಕ್ಕೆ ಮುಖ್ಯ ಅತಿಥಿಯಾಗಿ ಸ್ಟೇಷನ್ ಬಜಾರ್ ಪೊಲೀಸ್ ಠಾಣೆ ಸರ್ಕಲ್ ಇನ್ಸಪೆಕ್ಟರ್ ಶಕೀಲ್ ಅಹ್ಮದ್ ಅಂಗಡಿ ಅವರು ಆಗಮಿಸಿ ಮಾತನಾಡಿ ಸಂಚಾರ ನಿಯಮಗಳು ಕೇವಲ ಕಾನೂನುಗಳಲ್ಲ; ಅವು ಪ್ರತಿಯೊಬ್ಬರ ಜೀವವನ್ನು ರಕ್ಷಿಸುವ ಉತ್ತಮ ಜೀವನ ಪದ್ಧತಿಗಳಾಗಿವೆ ಎಂದು ತಿಳಿಸಿದರು. ವಿದ್ಯಾರ್ಥಿಗಳು ಹಾಗೂ ಪೋಷಕರು ಹೆಲ್ಮೆಟ್ ಧ–ರಿಸುವುದು, ಸೀಟ್ ಬೆಲ್ಟ್ ಕಟ್ಟಿಕೊಳ್ಳುವುದು, ವಾಹನ ಚಲಾಯಿಸುವಾಗ ಮೊಬೈಲ್ ಫೋನ್ ಬಳಸದೇ ಇರುವುದು, ಅತಿವೇಗವನ್ನು ತಪ್ಪಿಸುವುದು, ಸಂಚಾರ ಸಂಕೇತಗಳನ್ನು ಕಟ್ಟುನಿಟ್ಟಾಗಿ ಪಾಲಿಸುವುದು ಹಾಗೂ ಅಪ್ರಾಪ್ತ ವಯಸ್ಸಿನ ಮಕ್ಕಳಿಗೆ ವಾಹನ ಚಾಲನೆ ಮಾಡಲು ಅವಕಾಶ ನೀಡದಿರುವುದು ಅತ್ಯಂತ ಮುಖ್ಯ ಎಂದು ಅವರು ಕರೆ ನೀಡಿದರು.

ನ್ಯೂ ಎಂ.ಎ.ಎಂ. ಇಂಟರ್‌ನ್ಯಾಷನಲ್ ಪಬ್ಲಿಕ್ ಸ್ಕೂಲ್ ಅಧ್ಯಕ್ಷ ಎಂ. ಎ. ನಜೀಬ್,ಪ್ರಾಂಶುಪಾಲ ಶೇಖ್ ಚಾಂದ್ ಪಾಷಾ ಅವರು ಸೇರಿದಂತೆ ಶಿಕ್ಷಕವೃಂದದರು,ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಪ್ರಭುಲಿಂಗ ಲೀಲೆ ಸತ್ಯ ಶರಣರ ಕಥೆ



ಕಲಬುರಗಿ: ಶರಣರು ತುತ್ತಿನ ಚೀಲದ ಹೋರಾಟದ ಜಗತ್ತಿನ ದೊಡ್ಡ ಸತ್ಯವನ್ನುಬಿಚ್ಚಿಟ್ಟಿದ್ದಾರೆ.ವೀರವೈರಾಗ್ಯನಿಧಿ ಅಕ್ಕಮಹಾದೇವಿಹಸಿವಾದೊಡೆ ಬಿಕ್ಷಾನ್ನಗಳುಂಟುಎಂದು ಹೇಳಿದರೆ, ಜೇಡರ ದಾಸಿ ಮಯ್ಯನವರು ಒಡಲುಗೊಂಡವ ಹಸಿವ ನಿನ್ನೊಮ್ಮೆಒಡಲುಗೊಂಡು ನೋಡು ಎಂದು ದೇವರಿಗೆ ಪ್ರಶ್ನೆ ಮಾಡಿದ್ದಾರೆ.ಹಸಿವೆಂಬ ಹೆಬ್ಬಾವು ಬಸುರ ಬಂದು ಹಿಡಿದಡೆ ವಿಷವೇರಿತ್ತಯ್ಯ ಅಪಾದ ಮಸ್ತಕಕ್ಕೆಎಂದು ತುತ್ತಿನ ಚೀಲ ತುಂಬಿಸಿಕೊಳ್ಳುವ ಅವಶ್ಯಕತೆ ಕುರಿತು ಹೇಳಿದ್ದಾರೆ.ಇದನ್ನೇ ಅಲ್ಲಮಪ್ರಭುಗಳು ಈ ಲೌಕಿಕ ಜಗತ್ತಿನ ವಿಷಯ ಭೋಗದಲ್ಲಿಬಿದ್ದು ತೆತ್ತಿಸಕೋಟಿ ಜನ ಒದ್ದಾಡುತ್ತಿದ್ದಾರೆ ಎಂದುಹೇಳಿದ್ದಾರೆ. ಮಾನವನಾದಿಯಾಗಿ ಪ್ರಾಣಿ, ಪಶು, ಪಕ್ಷಿಗಳು ಕೂಡ ತುತ್ತಿನ ಚೀಲದ ಹೋರಾಟ ನಡೆಸಿರುವುದನ್ನು ನಾವುಕಾಣಬಹುದು. ಅನ್ನಕ್ಕಾಗಿ ಹಪಹಪಿಸುವವರನ್ನು, ತಿನ್ನಲಿಕ್ಕೆ ಅನ್ನವಿಲ್ಲದವರನ್ನು, ಒಂದು ತುತ್ತಿಗೂ ಗತಿ ಇಲ್ಲದವರನ್ನುಇಂದಿನ ಮಾನವ ಸಮಾಜದಲ್ಲಿ ನೋಡಬಹುದು. ಹೀಗಾಗಿ ಅನ್ನ ಕೆಡಿಸಬಾರದು ಎಂದು ಶರಣರು ಹೇಳಿದ್ದಾರೆ. ಪ್ರಸಾದತತ್ವವನ್ನು ಆವರು ಹೇಳಿಕೊಟ್ಟಿದ್ದಾರೆ. ಪ್ರಸಾದ ಎಲ್ಲರಿಗೂ ಪ್ರಸನ್ನತೆ ಕೊಡಬಲ್ಲದು. ಕಾಯಕ ಮತ್ತು ದಾಸೋಹ ಈ ಎರಡು ಜೀವನ ಸಿದ್ಧಾಂತ ಬೋಧಿಸಿದ ಶರಣರು ಕಾಯಕದಿಂದ ಬಂದುದರಲ್ಲಿ ಉಣಿಸಿ ಉಣ್ಣುವಭಾವ–ಭಕ್ತಿಯನ್ನು ಕಲಿಸಿದರು. ಅಂತೆಯೇ ಉಣಲು ಕಲಿಸಿದ ಬಸವಣ್ಣ, ಉಡಲು ಕಲಿಸಿದ ಬಸವಣ್ಣ ಎಂದು ಹೇಳುತ್ತೇವೆ. ಡಿವಿಜಿಯವರುನೀನು ಉಣ್ಣುವ ಅನ್ನ ಶ್ರಮದ ಬೆವರೇ? ಪರರ ಕಣ್ಣೀರೆ? ಎಂಬ ವಿವೇಚನಾತ್ಮಕ ನುಡಿಗಳನ್ನು ಹೇಳಿದ್ದಾರೆ. ಯಜ್ಞ, ಯಾಗದ ನೆಪದಲ್ಲಿ ಅಗ್ನಿಗೆ ಆಹುತಿ ಮಾಡುವ ಪ್ರೊಟಿನ್ ಯುಕ್ತ ಪದಾರ್ಥಗಳನ್ನು ಬಡವರ ಜಠರಾಗ್ನಿಗೆ ಹಾಕಬೇಕು. ಅನ್ನವಿಲ್ಲದವರಿಗೆ ಅನ್ನ ಹಾಕಿದರೆ ಉಂಡ

ವರಿಗೆ ಮತ್ತು ಉಣಿಸಿದವರಿಗೆ ಇಬ್ಬರಿಗೂ ತೃಪ್ತಿ ಭಾವ, ಭಕ್ತಿ ಭಾವ ಮೂಡಬಲ್ಲುದು.

ಉಂಡು ಉಂಡು ಹೋಗುವವರ ನೋಡಿ ನೋಡಿನಾಚಿತ್ತಯ್ಯಾ ಎನ್ನ ಮನ.

ಎಡಹಿ ಎಡಹಿ ಹೋಗುವವರ ನೋಡಿ ನೋಡಿನಾಚಿತ್ತಯ್ಯಾ ಎನ್ನ ಮನ.

ಉಣದೆ ಎಡಹದೆ ಹೋದಡೆ ಅವರೆ ಬಸವಾದಿ ಪ್ರಮಥರೆಂಬೆ;ಅವರೆ ನೀವೆಂದು ಭಾವಿಸುವೆನಯ್ಯಾ,

ಕಪಿಲಸಿದ್ಧಮಲ್ಲಿಕಾರ್ಜುನಾ!

ಯಾರು ಉಣ್ಣಬೇಕು? ಯಾವುದನ್ನು ಉಣ್ಣಬೇಕು, ಏಕೆ ಉಣ್ಣಬೇಕು ಎಂಬ ಅನ್ನದ ಮಹತ್ವ ಸಾರಿದ ಶರಣರು ಸಾಕ್ಷಾತಕಪಿಲಸಿದ್ಧ ಮಲ್ಲಿಕಾರ್ಜುನನ ಸ್ವರೂಪರು ಕರೆದಿದ್ದಾರೆ. ಹೀಗೆ ಚಾಮರಸನ ಪ್ರಭುಲಿಂಗಲೀಲೆಯ ಪ್ರಥಮ ಗತಿಯಲ್ಲಿ ಪ್ರಭುವಿನಮಹತಿಯ ಜೊತೆಗೆ ಸತ್ಯ ಶರಣರ ಕಥೆ ಹೇಳುವಂತಿ ಹೊರತು ಸತ್ತವರ ಸಾಯುವವರ ಕಥೆ ಅಲ್ಲ.ಪೂಜ್ಯ ಮಹಾಂತಸ್ವಾಮಿಗಳು. ಕಲ್ಯಾಣಾಶ್ರಮ. ಮುದಗಲ್‌ಪರಿಸರವಾದಿ ಸೋನಮ್ ವಾಂಗ್ಚುಕ್ ಬೆಂಬಲಿಸಿ, ಧರ್ಮೆಂದ್ರ ಪ್ರಧಾನ ರಾಜೀನಾಮೆ ಒತ್ತಾಯಿಸಿ ಪ್ರತಿಭಟನೆ

# ದಾಸ ಸಾಹಿತ್ಯ ವಿಶ್ವಮಾನವನಾಗಲು ಪ್ರೇರಣೆ:ಜಾಧವ



ಕಲಬುರಗಿ:ವಚನ ಮತ್ತು ದಾಸ ಸಾಹಿತ್ಯ ಪ್ರಕಾರಗಳೆರಡೂ ನಾಡು ನುಡಿಗೆ ಕೊಟ್ಟ ಬಹುದೊಡ್ಡ ಕೊಡುಗೆಯಾಗಿದೆ. ಈ ಸಾಹಿತ್ಯದ ಅನುಕರಣೆಯಿಂದ ನಾವು ವಿಶ್ವಮಾನವರಾಗಲು ಪ್ರೇರಣೆಯಾಗಿದೆ"–

ಎಂದು ಹಿರಿಯ ಸಾಹಿತಿ ಡಾ.ಸುರೇಶ ಜಾಧವ ಅಭಿಪ್ರಾಯಪಟ್ಟರು.

ವಚನ ಮತ್ತು ದಾಸ ಸಾಹಿತ್ಯ ಕನ್ನಡಮ್ಮನ ಎರಡು ಕಣ್ಣುಗಳು, ದಾಸರ ಹಾಡುಗಳು ಜನಮೂಲವಾಗಿವೇ ವಿನಹ ಜಾತಿಮೂಲವಲ್ಲ. ವಿವಿಧ ಬವಣೆಗೆ ಒಳಗಾದ ಮಹಿಳೆಯರು ದಾಸರ ಹಾಡುಗಳಿಂದ ಪ್ರೇರಣೆ ಹೊಂದಿ ಅವರು ಕೀರ್ತನೆಗಳು ಹಾಡುತ್ತ ಮಹಿಳಾ ಕೀರ್ತನಕಾರರಾದರು ಎಂದರು. ದಾಸ ಸಾಹಿತ್ಯ: ದೃಷ್ಟಿ–ಸೃಷ್ಟಿ ಕೃತಿ ಲೇಖಕರಾದ ಡಾ.ಸ್ವಾಮಿರಾವ ಕುಲಕರ್ಣಿಯವರು ಮಾತನಾಡುತ್ತ, ದಾಸ ಸಾಹಿತ್ಯವು ಸಾಮಾಜಿಕ ಪರಿವರ್ತನೆ ಮಾಡಲು ಹುಟ್ಟಿತು. ಈ ಸಾಹಿತ್ಯ ಪ್ರಕಾರಕ್ಕೆ ಜಾತಿ ಇಲ್ಲ, ತ್ಯಾಗದ ತಳಪಾಯದ ಮೇಲೆ ನಿಂತಿದೆ ಎನ್ನುತ" ಅಂತರಂಗದ ಕದವು ತೆರೆಯಿತಿಂದು,ಎಂತು ಪುಣ್ಯದ ಪ್ರಾಪ್ತಿ ದೊರಕಿತು ಎನಗೆ"ಎಂದು ವಿಜಯದಾಸರ ಹಾಡು ಹಾಡಿದರು. ಕನ್ನಡ ನಾಡು ಲೇಖಕರ ಮತ್ತು ಓದುಗರ ಸಹಕಾರ ಸಂಘವು ದಾಸಸಾಹಿತ್ಯ:ದೃಷ್ಟಿಸೃಷ್ಟಿ ಕೃತಿಯ ಪರಿಚಯ ಕಾರ್ಯಕ್ರಮದ ಆಯೋಜನೆ ಮಾಡಿತ್ತು, ಸಂಘದ ಅಧ್ಯಕ್ಷರಾದ ಅಪ್ಪಾರಾವ ಅಕ್ಕೋಣೆಯವರು ಅಧ್ಯಕ್ಷೀಯ ಮಾತನಾಡಿದರು.ಡಾ. ಶ್ರೀಶೈಲ ನಾಗರಾಳ ಅವರು ಪ್ರತಿಕ್ರಿಯೆ ವ್ಯಕ್ತ ಪಡಿಸಿದರು. ಡಾ. ವಿಜಯಕುಮಾರ ಪರುತೆ ಕಾರ್ಯಕ್ರಮದ ನಿರೂಪಣೆ ಮಾಡಿದರು. ಡಾ.ಗವಿಸಿದ್ಧಪ್ಪ ಪಾಟೀಲ್, ಸಿದ್ಧರಾಮ ಸರಸಂಬಿ,ನಾರಾಯಣ ಕುಲಕರ್ಣಿ, ರಾಜೇಂದ್ರ ಝಳಕಿ, ಡಾ.ರಾಜಕುಮಾರ ಮಾಳಗೆ, ಡಾ.ಸಿದ್ಧಪ್ಪ ಹೊಸಮನಿ, ಎಸ್.ಎಸ್.ಹೂಗಾರ, ರೇವಣಸಿದ್ಧಪ್ಪ ದುಕಾನ, ಪ್ರೊ.ಎಸ್.ಎಲ್.ಪಾಟೀಲ್ ಮತ್ತು ಚಿಂತಕರಾದ ಶರಣಗೌಡ ಪಾಳಾ ಅವರು

# ಗಾಳಿ ವಿದ್ಯುತ್ ಯೋಜನೆ: ಭೂ ಒಪ್ಪಂದ ಸಮಗ್ರ ತನಿಖೆಗೆ ಹರ್ಷಾ ಎಸ್ ಗುತ್ತೇದಾರ ಆಗ್ರಹ



ಕಲಬುರಗಿ:ಗಾಳಿ ವಿದ್ಯುತ್ ಯೋಜನೆಗಳಿಗೆ ಸಂಬಂಧಿಸಿದ ಭೂ ಒಪ್ಪಂದಗಳ ಃಔಔಐ–1ನೋಂದಣಿ

ಕುರಿತು ತನಿಖೆ ನಡೆಸಿ, ರೈತ ಸ್ನೇಹಿ ಹಾಗೂ ಏಕರೂಪ ನೋಂದಣಿ ವ್ಯವಸ್ಥೆ ಜಾರಿಗೊಳಿಸುವಂತೆ ಜಿ.ಪಂ ಮಾಜಿ ಉಪಾಧ್ಯಕ್ಷ ಹರ್ಷಾ ಎಸ್ ಗುತ್ತೇದಾರ ಒತ್ತಾಯಿಸಿದ್ದಾರೆ.

ಶುಕ್ರವಾರ ಬೆಂಗಳೂರಿನಲ್ಲಿರುವ ನೋಂದಣಿ ಮತ್ತು ಮುದ್ರಾಂಕ ಇಲಾಖೆಯ ನೋಂದಣಿ ಮಹಾನಿರೀಕ್ಷಕರು ಹಾಗೂ ಮುದ್ರಾಂಕಗಳ ಆಯುಕ್ತರಿಗೆ ಭೇಟಿಯಾಗಿ ಮನವಿ ಪತ್ರ ಸಲ್ಲಿಸಿರುವ ಅವರು, ಕಲಬುರಗಿ ಜಿಲ್ಲೆಯ ಆಳಂದ ವಿಧಾನಸಭಾ ಕ್ಷೇತ್ರದಲ್ಲಿ ಗಾಳಿ ವಿದ್ಯುತ್ ಯೋಜನೆಗಳಿಗಾಗಿ ಕೆಲವು ಖಾಸಗಿ ಕಂಪನಿಗಳು, ವಿಶೇಷವಾಗಿ ಬ್ಲೂ ಪೈನ್ ಎನರ್ಜಿ ಲಿಮಿಟೆಡ್, ರೈತರೊಂದಿಗೆ ಮಾಡಿಕೊಂಡಿರುವ ಭೂ ಒಪ್ಪಂದಗಳ ನೋಂದಣಿ ವಿಧಾನದಿಂದ ಸಾವಿರಾರು ರೈತರು ಹಲವು ರೀತಿಯ ತೊಂದರೆಗಳನ್ನು ಎದುರಿಸುತ್ತಿದ್ದಾರೆ, ಆದ–'ರೆ ರೈತರ ಹಕ್ಕುಗಳಿಗೆ ಧಕ್ಕೆಯಾಗದಂತೆ ನೋಂದಣಿ ವ್ಯವಸ್ಥೆ ರೈತ ಸ್ನೇಹಿಯಾಗಿರಬೇಕು ಎಂದು ಮನವಿಯಲ್ಲಿ ತಿಳಿಸಿದ್ದಾರೆ. ಪ್ರಸ್ತುತ ಕಂಪನಿಯು GPA ಮೂಲಕ ಃOOK–1 ಅಡಿಯಲ್ಲಿ ಒಪ್ಪಂದಗಳನ್ನು ನೋಂದಣಿ ಮಾಡಿಸುತ್ತಿದೆ ಎಂದು ತಿಳಿದುಬಂದಿದೆ. ಇದರಿಂದ ರೈತರಿಗೆ ಇಅ ದಾಖಲೆ, ಬ್ಯಾಂಕ್

ಸಾಲ, ಬೆಳೆ ವಿಮೆ, ಸರ್ಕಾರಿ ಯೋಜನೆಗಳು, ಓಔಅ ಅಗತ್ಯ ಹಾಗೂ ಭವಿಷ್ಯದ ವ್ಯವಹಾರಗಳಲ್ಲಿ ತೊಂದರೆ ಉಂಟಾಗುತ್ತಿದೆ ಎಂದು ರೈತರು ತಮಗೆ ದೂರು ನೀಡಿದ್ದಾರೆ ಎಂದು ಹೇಳಿದ್ದಾರೆ. ಇದಲ್ಲದೆ, ಸುಜ್ಲಾನ್ ಎನರ್ಜಿ ವಿಜಯಪುರ ಮತ್ತು ಗದಗ ಜಿಲ್ಲೆಗಳಲ್ಲಿ ದಾರಿಹಕ್ಕು ಹಾಗೂ ವೈಮಾನಿಕ ಹಕ್ಕುಗಳ ಇಚಿಜಟಜಟಿಣ ಒಪ್ಪಂದಗಳನ್ನು ಃOOK–4ರಲ್ಲಿ ನೋಂದಣಿ ಮಾಡಿರುವುದಾಗಿ ತಿಳಿದುಬಂದಿದೆ. ಇದು ಕಾನೂನುಬದ್ಧವಾಗಿದ್ದರೆ, ಇದೇ ರೀತಿಯ ರೈತ ಸ್ನೇಹಿ ವ್ಯವಸ್ಥೆಯನ್ನು ರಾಜ್ಯಾದ್ಯಂತ ಪರಿಶೀಲಿಸಿ ಜಾರಿಗೊಳಿಸುವಂತೆ ಆಗ್ರಹಿಸಿದ್ದಾರೆ.

ಆದ್ದರಿಂದ ಇಲಾಖಾ ತನಿಖೆ ನಡೆಸಿ, ಃOOK–1 ಬದಲಿಗೆ ಃOOK–4 ಅಥವಾ ಇತರೆ ಕಾನೂನುಬದ್ಧ ರೈತ ಸ್ನೇಹಿ ವಿಧಾನವನ್ನು ಪರಿಶೀಲಿಸಿ, ರಾಜ್ಯಾದ್ಯಂತ ಏಕರೂಪ

# ಬರಗಾಲ ಘೋಷಿಸಿ ರೈತರಿಗೆ ತಕ್ಷಣ ಪರಿಹಾರ ನೀಡಿ: ಸುಂದರ ಸಾಗರ ಆಗ್ರಹ



ಕಲಬುರಗಿ: ಜಿಲ್ಲೆಯಲ್ಲಿ ಸಮರ್ಪಕ ಮಳೆಯಾಗದೆ ಮುಂಗಾರು ಬೆಳೆಗಳು ಒಣಗುತ್ತಿರುವ ಹಿನ್ನೆಲೆಯಲ್ಲಿ ಕಲಬುರಗಿ ಜಿಲ್ಲೆಯನ್ನು ತಕ್ಷಣವೇ ಬರಪೀಡಿತ ಜಿಲ್ಲೆ ಎಂದು ಘೋಷಿಸಿ, ರೈತರಿಗೆ ಪ್ರತಿ ಎಕರೆಗೆ 50 ಸಾವಿರ ರೂಪಾಯಿ ಪರಿಹಾರ ನೀಡಬೇಕು ಎಂದು ಮಾದಿಗ ದಂಡೋರಾ ಹೋರಾಟ ಸಮಿತಿಯ ಜಿಲ್ಲಾಧ್ಯಕ್ಷ ಸುಂದರ ಡಿ ಸಾಗರ ಅವರು ಒತ್ತಾಯಿಸಿದ್ದಾರೆ.

ಈ ಕುರಿತು ಪತ್ರಿಕಾ ಹೇಳಿಕೆ ನೀಡಿದ ಅವರು, ಕಳೆದ ಎರಡುವರೆ ತಿಂಗಳಿಂದ ಮಳೆ ಕೈಕೊಟ್ಟ ಪರಿಣಾಮ ಸಾವಿರಾರುರೈತರುಸಂಕಷ್ಟಕ್ಕೆಸಿಲುಕಿದ್ದಾರೆ.ಬಿತ್ತಿದಬೆಳೆಗಳು ಒಣಗುತ್ತಿದ್ದು, ಜಿಲ್ಲೆಯಾದ್ಯಂತ ಬರದ ವಾತಾವರಣ ನಿರ್ಮಾಣವಾಗಿದೆ.ಗ್ರಾಮೀಣ ಪ್ರದೇಶಗಳಲ್ಲಿ ಕುಡಿಯುವ ನೀರಿನ ಸಮಸ್ಯೆಯೂ ತೀವ್ರಗೊಂಡಿದ್ದು, ಜನರು ಹಾಗೂ ಜಾನುವಾರುಗಳು ಸಂಕಷ್ಟ ಅನುಭವಿಸುತ್ತಿವೆ. ಯಾವುದೇ ವಿಳಂಬ ಮಾಡದೆ ಜಿಲ್ಲೆಯನ್ನು ಒಣ ಬರಪೀಡಿತ ಪ್ರದೇಶವೆಂದು ಘೋಷಿಸಬೇಕು ಎಂದು ಆಗ್ರಹಿಸಿದರು. ಸೂರ್ಯಕಾಂತಿ, ಹೆಸರು, ತೊಗರಿ,ಉದ್ದು ಸೇ–ರಿದಂತೆ ವಿವಿಧ ಮುಂಗಾರು ಬೆಳೆಗಳನ್ನು ಬಿತ್ತಿದ ರೈತರು ಉತ್ತಮ ಫಸಲಿನ ನಿರೀಕ್ಷೆಯಲ್ಲಿದ್ದರು. ಆದರೆ ಮಳೆಯ ಕೊರತೆಯಿಂದ ಆ ನಿರೀಕ್ಷೆ ಭಗ್ನಗೊಂಡಿದೆ. ಈಗಾಗಲೇ ಸಾಲ ಮಾಡಿಕೊಂಡಿರುವ ರೈತರು ತೀವ್ರ ಮಾನಸಿಕ ಹಾಗೂ ಆರ್ಥಿಕ ಒತ್ತಡಕ್ಕೆ ಒಳಗಾಗಿದ್ದು, ಆತ್ಮಹತ್ಯೆಯಂತಹ ದುರ್ಘಟನೆಗಳು ನಡೆಯುತ್ತಿರುವುದು ಅತ್ಯಂತ ಆತಂಕಕಾರಿ ಬೆಳವಣಿಗೆಯಾಗಿದೆ ಎಂದು ಹೇಳಿದರು. ಮುಖ್ಯಮಂತ್ರಿ, ಉಪಮುಖ್ಯಮಂತ್ರಿ ಹಾಗೂ ಕೃಷಿ ಇಲಾಖೆಯ ಹಿರಿಯ ಅಧಿಕಾರಿಗಳು ಜಿಲ್ಲೆಗೆ ಭೇಟಿ ನೀಡಿ ರೈತರ ನೈಜ ಪರಿಸ್ಥಿತಿಯನ್ನು ಪರಿಶೀಲಿಸಿ, ತುರ್ತು ಪರಿಹಾರ ಕ್ರಮಗಳನ್ನು ಕೈಗೊಳ್ಳಬೇಕು. ರೈತರ ಸಂಕಷ್ಟವನ್ನು ನಿರ್ಲಕ್ಷಿಸದೆ ಕೂಡಲೇ ಬರಗಾಲ ಘೋಷಣೆ ಮಾಡಿ ಸಮರ್ಪಕ ನೆರವು ನೀಡಬೇಕು ಎಂದು ಅವರು ಆಗ್ರಹಿಸಿದರು. ಜಿಲ್ಲೆಯಲ್ಲಿ ಬರ ಘೋಷಿಸಿ ತಕ್ಷಣ ಬರ ಕಾಮಗಾರಿಗಳನ್ನು ಆರಂಭಿಸಬೇಕು. ರೈತ, ಕಷಿ ಕೂಲಿಕಾರ್ಮಿರಿಗೆ ಉದ್ಯೋಗ ನೀಡಿ ಗುಳೆ ತಪ್ಪಿಸಬೇಕು.60 ವರ್ಷ ವಯಸ್ಸಿನ ರೈತ ಮತ್ತು ಕಷಿ ಅವಲಂಬಿತ ಕಾರ್ಮಿಕರಿಗೆ ಹಾಗೂ ಎಲ್ಲಾ ವರ್ಗದ ಶ್ರಮಿಕರಿಗೆ ಪಿಂಚಣಿ ನೀಡಬೇಕು ಎಂದು ಅವರು ಒತ್ತಾಯಿಸಿದರು.



ಕಲಬುರಗಿ: ನೀಟ್ ಪ್ರಶ್ನೆ ಪತ್ರಿಕೆ ಸೋರಿಕೆ ಅಕ್ರಮ ತಡೆಯುವಲ್ಲಿ ವಿಫಲರಾದ ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ರಾಜೀನಾಮೆಗೆ ಆಗ್ರಹಿಸಿ ದೆಹಲಿಯಲ್ಲಿ ಉಪವಾಸ ಸತ್ಯಾಗ್ರಹ ನಡೆಸುತ್ತಿರುವ ಸೋನಮ್ ವಾಂಗ್ಚುಕ್ ಅವರನ್ನು ಬಲಪ್ರಯೋಗ ಮಾಡಿ ಹೊತ್ತೊಯ್ದಿರುವ ಕ್ರಮವನ್ನು ಖಂಡಿಸಿ, ಕೇಂದ್ರ ಶಿಕ್ಷಣ ಸಚಿವ ಧರ್ಮೆಂದ್ರ ಪ್ರಧಾನ ರಾಜೀನಾಮೆಗೆ ಆಗ್ರಹಿಸಿ, ಎಟಿಎ ಮತ್ತು ಎಇಪಿ–2020 ಅನ್ನು ರದ್ದುಪಡಿಸಲು ಆಗ್ರಹಿಸಿ ಸಿಪಿಐಎಂ ಜಿಲ್ಲಾ ಸಮಿತಿ ನೇತೃತ್ವದಲ್ಲಿ ನಗರದಲ್ಲಿ ಇಂದು ಪ್ರತಿಭಟನೆ ನಡೆಸಲಾಯಿತು. ಪಕ್ಷದ ಜಿಲ್ಲಾ ಕಾರ್ಯದರ್ಶಿ ಕೆ.ನೀಲಾ, ಸುಧಾಮ ಧನ್ನಿ, ಭೀಮಶೆಟ್ಟಿ ಯಂಪಳ್ಳಿ, ಪಾಂಡುರಂಗ ಮಾವಿನಕರ, ಎಂ.ಬಿ.ಸಜ್ಜನ್, ಶಾಂತಾ ಘಂಟೆ, ಚಂದಮ್ಮಾ ಗೋಳಾ ಸೇರಿದಂತೆ ಮತ್ತಿತರರು ಪ್ರತಿಭಟನೆಯಲ್ಲಿ ಭಾಗವಹಿಸಿದ್ದರು.



ಕಲಬುರಗಿ: ಶ್ರೀ ಮಾದರ ಚೆನ್ನಯ್ಯ ಸೇವಾ ಸಮಿತಿ ಕರ್ನಾಟಕ ಕಲಬುರಗಿ ಜಿಲ್ಲಾ ಸಮಿತಿ ವತಿಯಿಂದ ಡಾ ಬಸವಮೂರ್ತಿ ಮಾದರ ಚೆನ್ನಯ್ಯ ಸ್ವಾಮೀಜಿಗಳ ಹುಟ್ಟು ಹಬ್ಬದ ಪ್ರಯುಕ್ತ ಇಂದು ನಗರದಲ್ಲಿ ಡಾ. ಬಾಬು ಜಗಜೀವನರಾಮ್ ಅವರ ಪುತ್ಥಳಿಗೆ ವಿಧಾನ ಪರಿಷತ್ತು ಸದಸ್ಯ ಡಾ. ಬಿ.ಜಿ ಪಾಟೀಲ ಅವರು ಮಾಲಾರ್ಪಣೆ ಮಾಡಿ ಅನ್ನಸಂತರ್ಪಣೆ ಮಾಡಿದರು.

# ಮಕ್ಕಳಲ್ಲಿನ ಪ್ರತಿಭೆಗಳು ಹೊರತರುವ ಕಾರ್ಯ ಕಸಾಪ ಮಾಡುತ್ತಿದೆ: ರಾಮತೀರ್ಥ



ಚಿತ್ತಾಪುರ:ಗ್ರಾಮೀಣ ಪ್ರದೇಶಗಳ ಶಾಲಾ ಮಕ್ಕಳಲ್ಲಿ ಅನೇಕ ವಿವಿಧ ಬಗೆಯ ಪ್ರತಿಭೆಗಳು ಅಡಗಿವೆ. ಅವರ ಪ್ರತಿಭೆಗಳು ಹೊರತರುವ ಕಾರ್ಯ ಕನ್ನಡ ಸಾಹಿತ್ಯ ಪರಿಷತ್ತು ಮಾಡುತ್ತಿದೆ ಎಂದು ತಾಪಂ ಮಾಜಿ ಅಧ್ಯಕ್ಷ ಜಗಣ್ಣಗೌಡ ರಾಮತೀರ್ಥ ಹೇಳಿದರು.

ತಾಲೂಕಿನ ಭೀಮನಳ್ಳಿ ಸರ್ಕಾರಿ ಪ್ರೌಢ ಶಾಲೆಯಲ್ಲಿ ಭೀಮನಳ್ಳಿ ವಲಯ ಕಸಾಪ ಶನಿವಾರ ಮಧ್ಯಾಹ್ನ ಹಮ್ಮಿಕೊಂಡ ಮಕ್ಕಳ ಸಾಹಿತ್ಯ ಸಂಭ್ರಮ ಮತ್ತು ಕಸಾಪ ಹಿರಿಯ ಸದಸ್ಯರಿಗೆ ಸನ್ಮಾನ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಮಕ್ಕಳಲ್ಲಿನ ಪ್ರತಿಭೆಗಳು ಹೊರತಂದರೆ ದೇಶ ಸಮೃದ್ಧಿಯಾಗುತ್ತದೆ ಎಂದರು.

ಕ್ಷೇತ್ರದ ಶಾಸಕ, ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಅವರ ಇಚ್ಛಾಶಕ್ತಿಯಿಂದ 4 ತಾಲೂಕು ಕನ್ನಡ ಸಾಹಿತ್ಯ ಸಮ್ಮೇಳನಗಳಾಗಿವೆ. ಭೀಮನಳ್ಳಿ ವಲಯ ಮಕ್ಕಳ ಸಾಹಿತ್ಯ ಸಮ್ಮೇಳನ ಮಾಡಬೇಕೆಂದು ಹೇಳಿದರು.

ಮಕ್ಕಳ ಸಾಹಿತ್ಯವು ಮಕ್ಕಳ ಮನಸ್ಸನ್ನು ರೂಪಿಸುವ ಅತ್ಯುತ್ತಮ ಸಾಧನವಾಗಿದೆ. ಕಥೆಗಳು, ಕವಿತೆಗಳು, ಹಾಡುಗಳು, ನಾಟಕಗಳು ಹಾಗೂ ಜೀವನ ಚರಿತ್ರೆಗಳು ಮಕ್ಕಳಲ್ಲಿ ಕಲ್ಪನಾಶಕ್ತಿ, ಸೃಜನಶೀಲತೆ, ಉತ್ತಮ ಮೌಲ್ಯಗಳು ಬೆಳೆಸುತ್ತವೆ. ಬದುಕಿನ ಮೌಲ್ಯಗಳು ಕಲಿಸಿ ಉತ್ತಮ ವ್ಯಕ್ತಿತ್ವವನ್ನು ರೂಪಿಸುತ್ತದೆ ಎಂದು ಹೇಳಿದರು.

ಇಂದಿನ ಡಿಜಿಟಲ್ ಯುಗದಲ್ಲಿ ಪುಸ್ತಕ ಓದುವ ಅಭ್ಯಾಸ ಸ್ವಲ್ಪ ಕಡಿಮೆಯಾಗುತ್ತಿದೆ. ಮಕ್ಕಳಿಗೆ ಉತ್ತಮ ಪುಸ್ತಕಗಳನ್ನು ಪರಿಚಯಿಸುವುದು, ಗ್ರಂಥಾಲಯಗಳ ಬಳಕೆ ಮಾಡಿಕೊಂಡು ಸ್ವಲ್ಪ ಸಮಯ ಓದಿಗೆ ಮೀಸಲಿಡಬೇಕೆಂದರು. ತಾಲೂಕು ಕಸಾಪ ಅಧ್ಯಕ್ಷ ವೀರಭದ್ರಪ್ಪ ಗುರುಮಿಠಕಲ್ ಮಾತನಾಡಿ, ಕನ್ನಡ ಭಾಷೆ ಅದ್ಭುತ ಭಾಷೆ. ಸಾಹಿತ್ಯ ಮನುಷ್ಯನನ್ನು ಪರಿಶುದ್ಧ ಮಾಡುತ್ತದೆ. ತಾಲೂಕಿನಲ್ಲಿ ಜ್ಞಾನ ಪೀಠ ಪ್ರಶಸ್ತಿ ಪುರಸ್ಕತರ ಉಪನ್ಯಾಸ, ಜಾನಪದ ಕಲೆ ಸೇರಿದಂತೆ ವಿವಿಧ ಸಾಹಿತ್ಯ ಚಟುವಟಿಕೆಗಳು ಹಮ್ಮಿಕೊಳ್ಳಲಾಗುವುದು ಎಂದರು.

ನ್ಯಾಯವಾದಿ ಶಂಕರ ವಿಜಾಪುರಕರ್, ಹಿರಿಯ ಸಾಹಿತಿಗಳಾದ ಲಿಂಗಣ್ಣ ಮಲ್ಕನ್, ಪಂಚಾಕ್ಷರಿ ಪೂಜಾರಿ, ಆಲ್ ಇಂಡಿಯಾ ಬಂಜಾರ ಸಮಾಜದ ತಾಲೂಕು ಪ್ರಧಾನ ಕಾರ್ಯದರ್ಶಿ ವಿಜಯಕುಮಾರ ನಾಯಕ ಯಾಗಾಪುರ, ಶಿವಶಂಕರ ಮಾತನಾಡಿದರು. ಕಸಾಪ ವಲಯ ಭೀಮನಳ್ಳಿ ವಲಯ ಅಧ್ಯಕ್ಷ ಲಿಂಗಪ್ಪ ಗೋಡೆಕರ್ ಅಧ್ಯಕ್ಷತೆವಹಿಸಿದ್ದರು. ಕಸಾಪ ಹಿರಿಯ ಸದಸ್ಯರಿಗೆ ಹಾಗೂ ಕಲಾವಿದರಿಗೆ ಸನ್ಮಾನಿಸಿ ಗೌರವಿಸಲಾಯಿತು. ಮಕ್ಕಳ ಸಾಹಿತ್ಯ ಸಂಭ್ರಮದಲ್ಲಿ 29 ಮಕ್ಕಳು ಭಾಗವಹಿಸಿ ಕವನ, ಭಾವಗೀತೆ, ಮೋಹರಂ ಹಾಡು. ಕಥೆಗಳು, ಜೋಗುಳ ಪದ ಸೇರಿದಂತೆ ವಿವಿಧ ಹಾಡುಗಳು ಹಾಡಿ ರಂಜಿಸಿದರು. ಪ್ರಥಮ, ದ್ವಿತೀಯ ಸ್ಥಾನ ಪಡೆದ ಮಕ್ಕಳಾದ ಕವನ ವಿಭಾಗ: ದೇವಕಿ (ಪ್ರಥಮ), ಭಾಗ್ಯಶ್ರೀ (ದ್ವಿತೀಯ), ಮೊಹರಂ ವಿಭಾಗ: ಮನೋಜ್ (ಪ್ರಥಮ), ಹಾಡು ವಿಭಾಗ: ಕಾವೇರಿ (ಪ್ರಥಮ), ನಾಜಿಯಾ (ದ್ವಿತೀಯ) ಸನ್ಮಾನಿಸಿ ಗೌರವಿಸಲಾಯಿತು.

ತಾಪಂ ಮಾಜಿ ಉಪಾಧ್ಯಕ್ಷ ಶರಣಗೌಡ ಮಾದ್ವಾರ, ಕಸಾಪ ತಾಲೂಕು ಗೌರವ ಅಧ್ಯಕ್ಷ ವೀರೇಂದ್ರಕುಮಾರ ಕೊಲ್ಲೂರ, ಗೌರವ ಕಾರ್ಯದರ್ಶಿ ಸಂಗಮೇಶ ರೋಣದ, ಭೀಮನಳ್ಳಿ ಸರ್ಕಾರಿ ಪ್ರೌಢ ಶಾಲೆ ಮುಖ್ಯಗುರು ಅಪ್ಪಯ್ಯ ಹಿರೇಮಠ, ಜಾನಪದ ಪರಿಷತ್ತ ವಲಯ ಅಧ್ಯಕ್ಷ ರವಿ ಕಾಸಲ, ಪ್ರಮುಖರಾದ ಸುಭಾಷಗೌಡ ಪಸಾರ, ಬಸಣ್ಣಗೌಡ ತತ್ತರೆಡ್ಡಿ, ಬಸವರಾಜ ಪೂಜಾರಿ, ಸ್ವಾಗತಿಸಿದರು. ಭಾಗ್ಯಶ್ರೀ ವಂದಿಸಿದರು.

# ಸಂತ್ರಸ್ತರ ಸಮಸ್ಯೆಗಳನ್ನು ಪರಿಹರಿಸಲು ರವಿ ಗೊಳಸಂಗಿ ಆಗ್ರಹ

■ ಉದಯರಶ್ಮಿ ದಿನಪತ್ರಿಕೆ



ಕೊಲ್ಹಾರ: ವಿಜಯಪುರ ಹಾಗೂ ಬಾಗಲಕೋಟೆ ಜಿಲ್ಲೆಗಳು ಕೃಷ್ಣಾ ಮೇಲ್ದಂಡೆ ಯೋಜನೆಯಿಂದ ಅತ್ಯಂತ ಹೆಚ್ಚು ಬಾಧಿತವಾಗಿರುವ ಜಿಲ್ಲೆಗಳಾಗಿದ್ದು, ಈ ಭಾಗದ ಸಂತ್ರಸ್ತರು ಹಲವು ವರ್ಷಗಳಿಂದ ಅನೇಕ ಸಮಸ್ಯೆಗಳನ್ನು ಎದು–ರಿಸುತ್ತಿದ್ದಾರೆ ಎಂದು ಕರ್ನಾಟಕ ರಕ್ಷಣಾ ವೇದಿಕೆ, (ಪ್ರವೀಣ ಶೆಟ್ಟಿ ಬಣ) ಕೊಲ್ಹಾರ ತಾಲೂಕ ಘಟಕದ ವತಿಯಿಂದ ರವಿ ಗೊಳಸಂಗಿ ಅವರು ಪ್ರಕಟಣೆಯಲ್ಲಿ ತಿಳಿಸಿದರು.

ಜಲ ಸಂಪನ್ಮೂಲ ಸಚಿವರು ಹಾಗೂ ಇಲಾಖೆಯ ಅಧಿಕಾರಿಗಳು ಜಿಲ್ಲೆಗೆ ಭೇಟಿ ನೀಡುವ ಸಂದರ್ಭದಲ್ಲಿ ಮುಂಚಿತವಾಗಿ ಮಾಹಿತಿ ನೀಡದೆ ಏಕಾಏಕಿ ಬಂದು ಹೋಗುತ್ತಿರುವುದು ಸರಿಯಾದ ಕ್ರಮವಲ್ಲ. ಸರ್ಕಾರವು ಜನರ ಅಹವಾಲುಗಳನ್ನು ಆಲಿಸಿ ಪರಿಹಾರ ನೀಡುವುದು ತನ್ನ ಪ್ರಮುಖ ಕರ್ತವ್ಯವಾಗಿದ್ದು, ಈ ಜವಾಬ್ದಾರಿಯನ್ನು ಅರಿತು ಕಾರ್ಯನಿರ್ವಹಿಸಬೇಕು ಎಂದು ಅವರು ಆಗ್ರಹಿಸಿದರು.

ಬಾಗಲಕೋಟೆ ಮತ್ತು ಆಲಮಟ್ಟಿಯಲ್ಲಿ ಕೃಷ್ಣಾ ಮೇಲ್ದಂಡೆ ಯೋಜನೆಗೆ ಸಂಬಂಧಿಸಿದ ಪುನರ್ವಸತಿ ಮತ್ತು ಪುನರ್ ನಿರ್ಮಾಣ ಕಚೇ–ರಿಗಳು ಇದ್ದು, ಜನರ ಅಹವಾಲುಗಳನ್ನು ಸ್ವೀಕರಿಸಲು ನಿಗದಿತ ಸಮಯವನ್ನು ಘೋಷಿಸಿ ಮುಂಚಿತವಾಗಿ ಪತ್ರಿಕಾ ಪ್ರಕಟಣೆ ನೀಡಬೇಕು. ಇದರಿಂದ ಸಂತ್ರಸ್ತರು ಹಾಗೂ ಸಾರ್ವಜನಿಕರು ತಮ್ಮ ಸಮಸ್ಯೆಗಳನ್ನು ಸಂಬಂಧಿಸಿದ ಅಧಿಕಾರಿಗಳಿಗೆ ತಿಳಿಸಿಕೊಳ್ಳಲು ಅನುಕೂಲವಾಗುತ್ತದೆ ಎಂದು ಅವರು ಅಭಿಪ್ರಾಯಪಟ್ಟರು.

ಅಧಿಕಾರಿಗಳು ಮುಂಚಿತ ಮಾಹಿತಿ ನೀಡದೆ ಭೇಟಿ ನೀಡಿ ಹಿಂತಿರುಗುವುದರಿಂದ ಜನರ ಸಮಸ್ಯೆಗಳು ಅಲಕ್ಷ್ಯವಾಗುತ್ತಿವೆ. ಈ ರೀತಿಯ ನಿರ್ಲಕ್ಷ್ಯ ಧೋರಣೆಯನ್ನು ಕರ್ನಾಟಕ ರಕ್ಷಣಾ ವೇದಿಕೆ ತೀವ್ರವಾಗಿ ಖಂಡಿಸುತ್ತದೆ ಎಂದು ರವಿ ಗೊಳಸಂಗಿ ತಿಳಿಸಿದ್ದಾರೆ.

# ವಿಜಯಪುರ ಸಂಸದರಿಗೆ ಅವಮಾನ :ದೇವರಮನಿ ಆಕ್ರೋಶ

■ ಉದಯರಶ್ಮಿ ದಿನಪತ್ರಿಕೆ




ಸಿಂದಗಿ: ನಗರದಲ್ಲಿ ನಡೆಯುತ್ತಿರುವ ವಿಜಯಪುರ ಜಿಲ್ಲಾ 21ನೇ ಕನ್ನಡ ಸಾಹಿತ್ಯ ಸಮ್ಮೇಳನ ಕಾರ್ಯಕ್ರಮದಲ್ಲಿ ಪ್ರೊಟೋಕಾಲ್ ಅನುಸ–ರಿಸದೆ ವಿಜಯಪುರ ಜಿಲ್ಲೆಯ ಸಂಸದರಾದ ರಮೇಶ ಜಿಗಜಿನಗಿ ಅವರ ಹೆಸರು ಕೈಬಿಟ್ಟು ಅವಮಾನಿಸಲಾಗಿದೆ. ಸಾಹಿತ್ಯ ಪರಿಷತ್ತು ಅನ್ನುವುದು ಸಾರ್ವಜನಿಕರ ಆಸ್ತಿ ಅದು ಯಾರೊಬ್ಬರ ಸ್ವತ್ತು ಅಲ್ಲ.. ಕಸಾಪ ಕರ್ನಾಟಕ ಸರಕಾರದ ಅಂಗಸಂಸ್ಥೆಯಾಗಿದ್ದು ರಾಜ್ಯದ ಯಾವುದೇ ಭಾಗದಲ್ಲಿ ಸಮ್ಮೇಳನ ನಡೆದರು ಆ ಭಾಗದ ಜನಪ್ರತಿನಿದಿನಗಳಿಗೆ ಆಹ್ವಾನ ನೀಡುವುದು ಸಂಪ್ರದಾಯವಾಗಿದೆ.

ಆದರೆ ವಿಜಯಪುರ ಜಿಲ್ಲೆಯಲ್ಲಿ ಇದನ್ನು ಗಾಳಿಗೆ ತೂರಿ ಬೇಕಾಬಿಟ್ಟಿ ಸಮ್ಮೇಳನ ನಡೆಸುತ್ತಿರುವುದು ವಿಷಾದಕರ ಎಂದು ಕರ್ನಾಟಕ ಆದಿಜಾಂಭವ ಜನಸಂಘ ಉತ್ತರ ಕರ್ನಾಟಕ ವಲಯ ಅಧ್ಯಕ್ಷರಾದ ಸಾಯಬಣ್ಣ ದೇವರಮನಿ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಒಬ್ಬ ಹಿರಿಯ ಮುತ್ಸದ್ದಿ ರಾಜ–ಕಾರಣಿ ಜಿಲ್ಲೆಯ ಸಂಸದರಿಗೆ ಆದ ಅವಮಾನ ಅವರೊಬ್ಬರಿಗೆ ಆದ ಅವಮಾನ ವಲ್ಲ ಇಡೀ ದಲಿತ ಸಮುದಾಯಕ್ಕೆ ಆದ ಅವಮಾನ. ಕೇವಲ ಕಾಟಾಚಾರಕ್ಕೆ ಸಂಸಧರನ್ನು ಹೊಗಳಿ ನೂರು –ಎರಡುನೂರು ಆಮಂತ್ರಣ ಪತ್ರಿಕೆ ಪ್ರಿಂಟ್ ಹಾಕಿ ವೇದಿಕೆ ಮೇಲೆ ಇಟ್ಟರೆ ಸಾಲದು ಬಹಿರಂಗವಾಗಿ ವಿಜಯಪುರ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷರಾದ ಹಾಸಿಂಪಿರ ವಾಲಿಕಾರ ರವರು ವಿಜಯಪುರ ಸಂಸದರಾದ ಶ್ರೀ ರಮೇಶ ಜಿಗಜಿನಗಿ ರವರಿಗೆ ಕ್ಷಮೆ ಕೇಳಬೇಕು. ಪತ್ಯೇಕ್ಷ ಹಾಗೂ ಪರೋಕ್ಷವಾಗಿ ಈ ಪ್ರಮಾದಕ್ಕೆ ಕಾರಣ–ರಾದ ಅಧಿಕಾರಿಗಳ ಮೇಲೆ ರಾಜ್ಯ ಸರಕಾರ ಶಿಸ್ತು ಕ್ರಮ ಕೈಗೊಳ್ಳಬೇಕು ಎಂದು ಸಾಯಬಣ್ಣ ದೇವರಮನಿ ಪತ್ರಿಕಾ ಪ್ರಕಟಣೆ ನೀಡಿದ್ದಾರೆ.

# ಮಾದಕ ವಸ್ತುಗಳಿಂದ ಶರೀರದ ಮೇಲೆ ನೇರ ಪರಿಣಾಮ : ಪಿಎಸೈ ಸಚೀನ



■ ಉದಯರಶ್ಮಿ ದಿನಪತ್ರಿಕೆ

ದೇವರಹಿಪ್ಪರಗಿ: ಮದ್ಯಪಾನ ಹಾಗೂ ಮಾದಕ ವಸ್ತುಗಳು ಮನಸ್ಸು ಹಾಗೂ ಶರೀರದ ಮೇಲೆ ನೇರ ಪರಿಣಾಮ ಬೀರುತ್ತವೆ ಎಂದು ಪಿಎಸೈ ಸಚೀನ ಆಲಮೇಲಕರ ಹೇಳಿದರು.

ತಾಲ್ಲೂಕಿನ ಪಡಗಾನೂರ ಗ್ರಾಮದ ಸರ್ಕಾರಿ ಕನ್ನಡ ಗಂಡು ಮಕ್ಕಳ ಮಾದರಿ ಶಾಲೆಯಲ್ಲಿ ಶನಿವಾರ ಜರುಗಿದ ಮಾದಕ ದ್ರವ್ಯ ವ್ಯಸನಮುಕ್ತ ಸಮಾಜ ನಿರ್ಮಾಣ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದರು.

ಮಾದಕ ಪದಾರ್ಥಗಳು ಹಾಗೂ ಮದ್ಯ ಸೇವನೆಯ ವ್ಯಸನ ಅತ್ಯಂತ ಗಂಭೀರವಾಗಿದ್ದು, ಶರೀರದ ಮೇಲೆ ನೇರವಾದ ಪರಿಣಾಮ ಉಂಟು ಮಾಡುತ್ತವೆ. ಆದ್ದರಿಂದ ಮಕ್ಕಳು, ವಿದ್ಯಾರ್ಥಿಗಳು ಇವುಗಳಿಂದ ದೂರವಿರಬೇಕು ಎಂದರು.

ಇದೇ ಸಂದರ್ಭದಲ್ಲಿ ಗ್ರಾಮದ ಶ್ರೀಗುರುಶಾಂತೇಶ್ವರ ಶಾಲೆ ಹಾಗೂ ವೆಂಕಟೇಶ್ವರ ಪ್ರೌಢಶಾಲೆಯ ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

ಗುರುಶಾಂತೇಶ್ವರ ಶಾಲೆಯ ಅಧ್ಯಕ್ಷ ಅಯ್ಯಪ್ಪಯ್ಯ ಸ್ವಾಮಿ ಹಿರೇಮಠ, ಗೋವಿಂದಗೌಡ ಪಾಟೀಲ ಮುಖ್ಯಶಿಕ್ಷಕ ಧನಸಿಂಗ್ ಲಮಾಣಿ, ಸಿಬ್ಬಂದಿ ಮಲ್ಲಿಕಾರ್ಜುನ ತಳಕೇರಿ, ಶ್ವೇತಾ ಮಹಾಜನಶೆಟ್ಟಿ, ದೀಪಾ ಉಪ್ಪಲದಿನ್ನಿ, ಮಹಾದೇವಿ ಬಿರಾದಾರ, ಜಮುನಾ ಜಾತಗಾರ, ಡಿ.ಎಚ್.ರಾಠೋಡ, ಎನ್.ಎಸ್.ಹಿರೇಮಠ ಹಾಗೂ ಮಕ್ಕಳು ಇದ್ದರು.

# ಗ್ರಾಮದೇವತಾ ಜಾತ್ರಾಮಹೋತ್ಸವದಲ್ಲಿ ಗೀಗೀ ಪದಗಳ ಸಂಭ್ರಮ



■ ಉದಯರಶ್ಮಿ ದಿನಪತ್ರಿಕೆ

ತಾಳಿಕೋಟೆಯಲ್ಲಿ ಜನಮನ ರಂಜಿಸಿದ ಗೀಗೀ ಪದಗಳು ತಾಳಿಕೋಟೆ, ತಾಳಿಕೋಟೆಯ ಶ್ರೀ ಗ್ರಾಮದೇವಿ ಜಾತ್ರಾಮಹೋತ್ಸವ ಅಂಗವಾಗಿ 2.3 ದಿನಗಳ ಕಾಲ ರಾಜವಾಡೆಯಲ್ಲಿ ಏರ್ಪಡಿಸಲಾದ ಗೀಗೀ ಪದಗಳು ವಿವಿಧ ರೀತಿಯ ಕಥ–'ಗಳನ್ನು ಪದಗಳಿಂದ ಹಾಡುವ ಮೂಲಕ ಅಥ–ರ್ೖಯಿಸುವದರೊಂದಿಗೆ ಹಾಡಿಕೆಯ ಗೀಗೀ ಪದಗಳು ಅರ್ಥಪೂರ್ಣವಾಗಿ ಜನಮನ ಸೆಳೆದವು.

ಈ ಗೀಗೀ ಪದಗಳ ಹಾಡಿಕೆಯ ತಂಡ ಬೆಳಗಾಂವಿ ಜಿಲ್ಲೆಯ ರಾಯಭಾಗ ತಾಲೂಕಿನ ಕಣದಾಳದ ಮುಖ್ಯ ಗಾಯಕ ಲಕ್ಷ್ಮಣ ಕಣದಾಳ ಹಾಗೂ ಇನ್ನೊಂದು ಬಾಗಲಕೋಟೆ ಜಿಲ್ಲೆಯ ಜಮಖಂಡಿ ತಾಲೂಕಿನ ಗೋಲಬಾವಿ ಗ್ರಾಮದ ಮುಖ್ಯ ಗಾಯಕಿ ಶ್ರೀಮತಿ ರೇಖಾ ಗೋಲಭಾವಿ ಅವರ ಈ ಎರಡೂ ತಂಡಗಳ ನಡುವೆ ನಡೆದ ಸೆಣಸಾಟದ ಗೀಗೀ ಪದಗಳಲ್ಲಿ ಗಂಡು ಹೆಚ್ಚೋ ಹೆಣ್ಣು ಹೆಚ್ಚೋ ಹಾಗೂ ಭಕ್ತಿ ಚರಿತ್ರೆಯ ಹಾಡುಗಳನ್ನು ಹಾಡುವದರೊಂದಿಗೆ ಕೇಳುಗರ ಹಾಗೂ ನೋಡುಗರ ಜನಮನ ಸೆಳೆದವಲ್ಲದೇ ಗ್ರಾಮೀಣ ಭಾಗದ ಜನಪದ ಕಲೆಗಳಲ್ಲಿ ಒಂದಾದ ಗೀ ಗೀ ಪದಗಳು ಇಂದಿಗೂ ತನ್ನದೇ ಆದ ಆರ್ಷಣೆಯನ್ನು ಉಳಿಸಿಕೊಂಡಿದ್ದು, ಜಾತ್ರೆಯ ಸಂಭ್ರಮಕ್ಕೆ ಮತ್ತಷ್ಟು ಮೆರುಗು ನೀಡಿದಂತಾಯಿತು.

ಜಾತ್ರಾ ಮಹೋತ್ಸವಗಳಲ್ಲಿ ಇಂತಹ ಸಾಂಪ್ರದಾಯಿಕ ಕಲೆಗಳಿಗೆ ವೇದಿಕೆ ಕಲ್ಪಿಸಿಕೊಡುವುದರಿಂದ ನಮ್ಮ ನಶಿಸಿಹೋಗುತ್ತಿರುವ ಜನಪದ ಸಂಸ್ಕೃತಿಯನ್ನು ಮುಂದಿನ ಪೀಳಿಗೆಗೆ ಪರಿಚಯಿಸಿದಂತಾಗುತ್ತದೆ.

ಗ್ರಾಮದೇವತೆಯ ಕೃಪೆಯಿಂದ ಇಡೀ ಸಮಾಜದಲ್ಲಿ ಸುಖ, ಶಾಂತಿ ನೆಲೆಸಲಿ ಎಂಬ ಆಶಯದೊಂದಿಗೆ ಜಾತ್ರೆಯ ಈ ದಿನದ ಈ ಗೀಗೀ ಪದದ ಸಾಂಸ್ಕೃತಿಕ ಸಂಭ್ರಮ ಯಶಸ್ವಿಯಾಗಿ ಇಂದು ಜರುಗಿತು.

# ಸಾಹಿತ್ಯ ಸಮ್ಮೇಳನ ಸರ್ವಾಧ್ಯಕ್ಷ ಹ.ಮ. ಪೂಜಾರ ರಿಗೆ ಸನ್ಮಾನ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ಜಿಲ್ಲಾ ಮಕ್ಕಳ ಸಾಹಿತ್ಯ ಸಂಗಮದ ವತಿಯಿಂದ 21ನೇ ಕನ್ನಡ ಸಾಹಿತ್ಯ ಸಮ್ಮೇಳನದ ಸರ್ವಾಧ್ಯಕ್ಷರಾದ ಹ.ಮ. ಪೂಜಾರ್ ಗುರುಗಳಿಗೆ ಅಭಿಮಾನ ಪೂರ್ವಕವಾಗಿ ಸನ್ಮಾನಿಸಿ ಮಾತನಾಡಿದ ಹಿರಿಯ ಮಕ್ಕಳ ಸಾಹಿತಿ ಪ. ಗು. ಸಿದ್ದಾಪುರವರು, ಹ.ಮ. ಪೂಜಾರ ಗುರುಗಳಿಗೆ 21ನೇ ಸಾಹಿತ್ಯ ಸಮ್ಮೇಳನದ ಸರ್ವಾಧ್ಯಕ್ಷ ಸ್ಥಾನ ಬಯಸದೇ ಬಂದ ಭಾಗ್ಯವಾಗಿದೆ ಎಂದರು.

ರಾಜ್ಯೋತ್ಸವ ಪ್ರಶಸ್ತಿಯ ನಂತರ ಸಿಂದಗಿಯ–ಎಚ್. ಜಿ. ಕಾಲೇಜಿನಲ್ಲಿ ದಿನಾಂಕ 21 ಮತ್ತು 22 ರಂದು ನಡೆಯಲಿರುವ ವಿಜಯಪುರ ಜಿಲ್ಲಾ ಕನ್ನಡ ಸಾಹಿತ್ಯ ಸಮ್ಮೇಳನದ ಸರ್ವಾಧ್ಯಕ್ಷರಾಗಿ ಆಯ್ಕೆ ಮಾಡಿದ್ದು ಸಂಗಮದ ಎಲ್ಲ ಸದಸ್ಯರಿಗೆ ಹರ್ಷವನ್ನುಂಟು ಮಾಡಿದೆ ಎಂದರು. ಹ.ಮ. ಪೂಜಾರ್ ಗುರುಗಳು ವಯೋಸಹಜ ತೊಂದರೆಗಳಿದ್ದರೂ ಮಾನಸಿಕವಾಗಿ ಚೈತನ್ಯವನ್ನು ಹೊಂದಿದ್ದಾರೆ. ಶೀಘ್ರದಲ್ಲಿಯೇ ಅವರ ಅವರ ಅಭಿನಂದನಾ ಗ್ರಂಥದ ಸಿದ್ಧತೆ ನಡೆಯಲಿ ಎಂದು ಸಲಹೆ ನೀಡಿದರು.

ಸನ್ಮಾನಕ್ಕೆಉತ್ತರವಾಗಿಸಮ್ಮೇಳನದಸರ್ವಾಧ್ಯಕ್ಷರಾದ ಹ.ಮ. ಪೂಜಾರ ಗುರುಗಳು, ಸಂಗಮದ ಸದಸ್ಯರೆಲ್ಲರೂ ನನ್ನ ಆತ್ಮೀಯ ಬಂಧುಗಳು ನಿಮ್ಮೆಲ್ಲರ ಆತ್ಮೀಯ ಸನ್ಮಾನಕ್ಕೆ ನಾನು ಚಿರಋಣಿಯಾಗಿದ್ದೇನೆ ಮಕ್ಕಳಿಗಾಗಿ ಕಾರ್ಯಕ್ರಮಗಳನ್ನು ನಾನು ನಿರಂತರ ಮಾಡುತ್ತಾ ಬಂದಿದ್ದೇನೆ ಇದು ನನ್ನ ಹವ್ಯಾಸವಾಗಿದೆ ಎಂದರು.

ಜಿಲ್ಲಾ ಮಕ್ಕಳ ಸಾಹಿತ್ಯ ಸಂಗಮದ ಅಧ್ಯಕ್ಷರಾದ ಎ.ಆರ್. ಹೆಗ್ಗನ ದೊಡ್ಡಿ ಅವರು ಮಾತನಾಡುತ್ತಾ, ಸಂಗಮದ ಸದಸ್ಯರೆಲ್ಲರೂ ಸೇರಿ ಹ.ಮ. ಪೂಜಾರ ಗುರುಗಳ ಸರ್ವಾಧ್ಯಕ್ಷತೆಯಲ್ಲಿ ಕನ್ನಡ ಸಾಹಿತ್ಯ ಸಮ್ಮೇಳನವನ್ನು ಸಂಭ್ರಮಿಸೋಣ ಎಂದರು. ಸಮ್ಮೇಳನದ ನಂತರ ಹ.ಮ. ಪೂಜಾರ ಅಭಿನಂದನ ಗ್ರಂಥ ಕುರಿತು ಅವರ ಶಿಷ್ಯಬಳಗ, ಮಕ್ಕಳ ಸಾಹಿತ್ಯ ಬಳಗ, ಸಾಹಿತಿಗಳು, ಅಭಿಮಾನಿಗಳು, ಹಿತೈಷಿಗಳ ಸಭೆ ಕರೆದು ಚರ್ಚಿಸಿ ಅಭಿನಂದನಾ ಗ್ರಂಥದ ಬಗ್ಗೆ ಕ್ರಮ ಕೈಗೊಳ್ಳಲಾಗುವುದು ಎಂದರು. ಕಾರ್ಯಕ್ರಮದಲ್ಲಿ ಡಾ ಜಿ ಎಸ್ ಭೂಸಗೊಂಡ, ಅರವಿಂದ್ ಸಿದ್ದಾಪುರ, ಬಗಲಿ ಶಿಕ್ಷಕರು, ಮಕ್ಕಳ ಸಾಹಿತಿಗಳಾದ ಶಿವಕುಮಾರ್ ಶಿವಶಿಂಪಿ ಎಸ್ ಎಸ್ ಸಾತಿಹಾಳ್, ಸಿದ್ದು ಬ್ಯಾಕೋಡ, ವಿಜಯ ಪೂಜಾರ, ರಾಜು ಪೂಜಾರ ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

# ವಿಜಯಪುರದಲ್ಲಿ ಗ್ರಂಥಾಲಯ ಪರಿಚಯ ಕಾರ್ಯಕ್ರಮ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ನಗರದ ಬಿಎಲ್‌ಡಿಇಎ ಸಂಸ್ಥೆಯ ಎ. ಎಸ್. ಪಾಟೀಲ ವಾಣಿಜ್ಯ ಮಹಾವಿದ್ಯಾಲಯ, ಗ್ರಂಥಾಲಯದ ವತಿಯಿಂದ ಬಿ.ಕಾಂ ವಿದ್ಯಾರ್ಥಿಗಳಿಗಾಗಿ "ಲೈಬ್ರರಿ ಎಸೆನ್ಷಿಯಲ್ಸ್: ಎಂಪವರಿಂಗ್ ಯೋರ್ ಅಕಾಡೆಮಿಕ್ ಜರ್ನಿ" ಎಂಬ ಶೀರ್ಷಿಕೆಯಡಿ ಗ್ರಂಥಾಲಯ ಪರಿಚಯ ಕಾರ್ಯಕ್ರಮವನ್ನು ಆಯೋಜಿಸಲಾಯಿತು.

ಕಾರ್ಯಕ್ರಮದಲ್ಲಿ ಗ್ರಂಥಪಾಲಕರಾದ ಡಾ. ಶಿವಗಂಗಾ ಸಾಲೋಟಗಿ ಅವರು ಗ್ರಂಥಾಲಯದಲ್ಲಿರುವ ಮುದ್ರಿತ ಹಾಗೂ ಡಿಜಿಟಲ್ ಸಂಪನ್ಮೂಲಗಳು, OPAC (Online Public Access Catalogue), ಪುಸ್ತಕ ವಿತರಣೆ ಸೇವೆ, ಉಲ್ಲೇಖ ವಿಭಾಗ, ಪತ್ರಿಕೆಗಳು, ನಿಯತಕಾಲಿಕೆಗಳು, ಹಿಂದಿನ ವರ್ಷದ ಪ್ರಶ್ನೆಪತ್ರಿಕೆಗಳು, ಇ–ಸಂಪನ್ಮೂಲಗಳು ಹಾಗೂ ವಿದ್ಯಾರ್ಥಿಗಳಿಗೆ ಲಭ್ಯವಿರುವ ವಿವಿಧ ಶೈಕ್ಷಣಿಕ ಸೇವೆಗಳ ಕುರಿತು ಸಮಗ್ರ ಮಾಹಿತಿ ನೀಡಿದರು.

ವಿದ್ಯಾರ್ಥಿಗಳ ಶೈಕ್ಷಣಿಕ ಪ್ರಗತಿ, ಸಂಶೋಧನಾ ಸಾಮರ್ಥ್ಯ ಹಾಗೂ ಮಾಹಿತಿ ಸಾಕ್ಷರತೆಯನ್ನು ವೃದ್ಧಿಸುವಲ್ಲಿ ಗ್ರಂಥಾಲಯದ ಮಹತ್ವವನ್ನು ಅವರು ವಿವರಿಸಿದರು.

ಕಾರ್ಯಕ್ರಮದ ಅಂಗವಾಗಿ ವಿದ್ಯಾರ್ಥಿಗಳಿಗೆ ಗ್ರಂಥ–ಾಲಯದ ವಿವಿಧ ವಿಭಾಗಗಳು, ಸಂಗ್ರಹಗಳು ಹಾಗೂ ಸೇವೆಗಳ ಪರಿಚಯವಾಗುವಂತೆ ಮಾರ್ಗದರ್ಶಿತ ಗ್ರಂಥ–ಾಲಯ ಪ್ರವಾಸ (Library Tour)ಹಮ್ಮಿಕೊಳ್ಳಲಾಯಿತು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಾಣಿಜ್ಯ ವಿಭಾಗದ ಮುಖ್ಯಸ್ಥರು ಹಾಗೂ ಪರೀಕ್ಷಾ ನಿಯಂತ್ರಕರಾದ ಡಾ. ಭಾರತಿ ಮಠ ವಹಿಸಿದ್ದರು.

ಈ ಸಂದರ್ಭದಲ್ಲಿ ಶ್ರೀಮತಿ ಪಲ್ಲವಿ ಪವಾರ್, ಶ್ರೀಮತಿ ಸ್ನೇಹಾ ಬೆಣಕಟ್ಟಿ ಹಾಗೂ ಶ್ರೀ ಶಿವಾನಂದ ಮಠಪತಿ ಉಪಸ್ಥಿತರಿದ್ದು, ವಿದ್ಯಾರ್ಥಿಗಳು ಗ್ರಂಥ–ಾಲಯದ ಸಂಪನ್ಮೂಲಗಳನ್ನು ಪರಿಣಾಮಕಾ–ರಿಯಾಗಿ ಬಳಸಿಕೊಳ್ಳುವಂತೆ ಪ್ರೋತ್ಸಾಹಿಸಿದರು.

ಕಾರ್ಯಕ್ರಮದಲ್ಲಿ ಪ್ರಥಮ ವರ್ಷದ ಬಿ.ಕಾಂ ವಿದ್ಯಾರ್ಥಿಗಳು ಉತ್ಸಾಹದಿಂದ ಭಾಗವಹಿಸಿ, ಗ್ರಂಥಾಲಯದ ವಿವಿಧ ಸೇವೆಗಳು ಹಾಗೂ ಸೌಲಭ್ಯಗಳ ಕುರಿತು ತಮ್ಮ ಸಂದೇಹಗಳಿಗೆ ಸ್ಪಷ್ಟನೆ ಪಡೆದುಕೊಂಡರು.

# ಮುಸುಕಿನ ಜೋಳದ ಕಡ್ಡಿಗೆ ಹೆಚ್ಚಿದ ಬೇಡಿಕೆ : ರೈತರಲ್ಲಿ ಸಂತಸ

## ಒಂದು ಟನ್ ಗೆ ರೂ. 2500-3000 ಸಾವಿರ ಇದ್ದ ಬೆಲೆ ಈಗ ಟನ್‌ಗೆ ರೂ. 4,500 ರವರೆಗೆ ಬೆಲೆ

■ ಉದಯರಶ್ಮಿ ದಿನಪತ್ರಿಕೆ

■ ವರದಿ : ಶ್ರೀಕಂಠ ಈಶ್ವರ್



ಎಚ್ ಡಿ ಕೋಟೆ: ತಾಲೂಕಿನಲ್ಲಿ ಮಳೆ ಕೊರತೆ ನಡುವೆಯೂ ಮುಸುಕಿನ ಜೋಳ ರೈತರ ಮುಖದಲ್ಲಿ ಕೊಂಚ ಮಂದಹಾಸ ಮೂಡಿಸಿದೆ.

ಕೆಲವು ಪ್ರದೇಶಗಳಲ್ಲಿ ಬೂಜು ಮತ್ತು ಬಿಳಿ ಸುಳಿ ರೋಗದ ಬಾಧೆ ಜೊತೆಗೆ ಬೆಳೆ ಸಮಸ್ಯೆಗಳು ಎದುರಾದರೂ ನೀರಾವರಿ ಸೌಲಭ್ಯ ಮತ್ತು ಸಮರ್ಪಕ ನಿರ್ವಹಣೆ ಮಾಡಿದ ರೈತರಿಗೆ ಮುಸುಕಿನ ಜೋಳ ಅಚ್ಚರಿ ಎಂಬಂತೆ ಲಾಭ ತಂದುಕೊಟ್ಟಿದೆ. ಸಾಮಾನ್ಯವಾಗಿ ಮುಸುಕಿನ ಜೋಳ ಬೆಳೆದ ರೈತರು ಕಾಳಿನತ್ತ ಹೆಚ್ಚು ಗಮನ ಹರಿಸುತ್ತಾರೆ. ಆದರೆ ಈ ಬಾರಿ ಕಥೆ ಸ್ವಲ್ಪ ಬೇರೆನೇ ಆಗಿದೆ. ಮುಸುಕಿನ ಕಾಳಿಗಷ್ಟೇ ಅಲ್ಲ, ಕಡ್ಡಿಗೂ ಉತ್ತಮ ಬೆಲೆ ಸಿಕ್ಕಿರುವುದು ರೈತರಲ್ಲಿ ಹೊಸ ಉತ್ಸಾಹ ಮೂಡಿಸಿದೆ.

### ಕೇರಳದಲ್ಲಿ ಹೆಚ್ಚಿದ ಬೇಡಿಕೆ

**ವೈನಾಡು ಹಾಗೂ ಮಾನಂದವಾಡಿ ಭಾಗಗಳಲ್ಲಿ ಹೈನುಗಾರಿಕೆ ಹೆಚ್ಚಿರುವುದರಿಂದ ವರ್ಷದಿಂದ ವರ್ಷಕ್ಕೆ ಹಸಿರು ಮೇವಿನ ಬೇಡಿಕೆಯೂ ಹೆಚ್ಚುತ್ತಿದೆ. ಇದೇ ಕಾರಣಕ್ಕೆ ಕೇರಳ ವ್ಯಾಪಾರಿಗಳು ಎಚ್.ಡಿ. ಕೋಟೆ ತಾಲ್ಲೂಕಿನ ಗ್ರಾಮಗಳಿಗೆ ಬಂದು ರೈತರ ಹೊಲಗಳಲ್ಲಿಯೇ ಜೋಳದ ಕಡ್ಡಿಯನ್ನು ಖರೀದಿಸಿ ಲಾರಿಗಳ ಮೂಲಕ ಸಾಗಿಸುತ್ತಿದ್ದಾರೆ. ಈ ಬಾರಿ ಮಳೆ ಕೊರತೆ, ಬೂಜು ರೋಗ ಹಾಗೂ ಬಿಳಿ ಸುಳಿ ರೋಗದಿಂದ ಬಹುತೇಕ ರೈತರಿಗೆ ಉತ್ತಮ ಬೆಳೆ ಬಂದಿಲ್ಲ. ಆದರೆ ಉತ್ತಮ ಗುಣಮಟ್ಟದ ಕಡ್ಡಿಗೆ ಟನ್‌ಗೆ ರೂ. 4,500ರವರೆಗೆ ಬೆಲೆ ಸಿಕ್ಕಿರುವುದು ಸ್ವಲ್ಪ ನೆಮ್ಮದಿ ತಂದಿದೆ ಎಂದು ಹಿರೇಹಳ್ಳಿ ಭಾಗದ ರೈತರು ತಿಳಿಸಿದ್ದಾರೆ.**

ಎಚ್.ಡಿ. ಕೋಟೆ ಹಾಗೂ ಸರಗೂರು ತಾಲ್ಲೂಕುಗಳಲ್ಲಿ ಈ ವರ್ಷ ಸುಮಾರು 24,500 ಹೆಕ್ಟೇರ್ ಪ್ರದೇಶದಲ್ಲಿ ಮೆಕ್ಕೆಜೋಳ ಬಿತ್ತನೆಯಾಗಿತ್ತು. ಉತ್ತಮ ಮಳೆಯ ನಿರೀಕ್ಷೆಯಲ್ಲಿ ರೈತರು ಹೆಚ್ಚಿನ ಪ್ರಮಾಣದಲ್ಲಿ ಮೆಕ್ಕೆಜೋಳ ಬಿತ್ತನೆ ಮಾಡಿದ್ದರು. ಆದರೆ ಮಳೆ ಕೊರತೆ, ಬೂಜು ರೋಗ ಹಾಗೂ ಬಿಳಿ ಸುಳಿ ರೋಗದ ಪರಿಣಾಮದಿಂದ ಬಹುತೇಕ ಕಡೆ ಬೆಳೆ ಹಾನಿಗೊಳಗಾಗಿ ರೈತರು ನಷ್ಟ ಅನುಭವಿಸಿದ್ದಾರೆ. ಬಿತ್ತನೆ ಮಾಡಿದ ಒಂದು ತಿಂಗಳೊಳಗೆ ರೋಗ ಕಾಣಿಸಿಕೊಂಡ ಪರಿಣಾಮ ಅದೆಷ್ಟು ರೈತರು ಮುಸುಕಿನ ಜೋಳ ಗಿಡವನ್ನು ಕಿತ್ತು ಬೇರೆ ಬೆಳೆ ಬೆಳೆದಿದ್ದಾರೆ. ಇಂತಹ ಪರಿಸ್ಥಿತಿ ನಡುವೆಯೂ ನೀರಾವರಿ ಸೌಲಭ್ಯ ಮತ್ತು ಉತ್ತಮವಾಗಿ ನಿರ್ವಹಣೆ ಮಾಡಿದೆ ಪರಿಣಾಮ ಉತ್ತಮ ಗುಣಮಟ್ಟದ ಮುಸುಕಿನ ಜೋಳದ ಕಡ್ಡಿ ಹುಲುಸಾಗಿ ಬೆಳೆದಿದ್ದು, ಕೇರಳದ ವ್ಯಾಪಾರಿಗಳು ರೈತರ ಜಮೀನುಗಳಿಗೆ ದಾಗಂಡಿ ಇಡುತ್ತಿದ್ದಾರೆ.

ಬಿತ್ತನೆ ಬೀಜ ಮಾಡಿ ಎರಡೂವರೆ ತಿಂಗಳು ಆಗುತ್ತಿದ್ದಂತೆ ಕೇರಳ ವ್ಯಾಪಾರಿಗಳು ರೈತರ ಜಮೀನುಗಳಿಗೆ ಬಂದು ಮುಸುಕಿನ ಜೋಳದ ಕಡ್ಡಿ ಕಟಾವು ಮಾಡಿಕೊಂಡು ಹೋಗುತ್ತಿದ್ದಾರೆ. ಇಷ್ಟು ವರ್ಷ ಒಂದು ಟನ್ ಗೆ ರೂ. 2500–3000 ಸಾವಿರ ಬೆಲೆ ಇತ್ತು. ಆದರೆ ಈ ಬಾರಿ ಟನ್‌ಗೆ ರೂ. 4,500ರವರೆಗೆ ಬೆಲೆ ದೊರೆಯುತ್ತಿರುವುದು ರೈತರಲ್ಲಿ ಕೊಂಚ ಮಟ್ಟಿಗೆ ನಿಟ್ಟುಸಿರು ಬಿಡುವಂತೆ ಮಾಡಿದೆ. ಆದರೆ ಈ ದರ ಎಲ್ಲ ರೈತರಿಗೆ ದೊರೆಯುತ್ತಿಲ್ಲ. ಬೂಜು ಹಾಗೂ ಬಿಳಿ ಸುಳಿ ರೋಗದಿಂದ ತೀವ್ರ ಹಾನಿಗೊಳಗಾದ ಮತ್ತು ಬೆಳವಣಿಗೆ ಕುಂಠಿತಗೊಂಡ ಜಮೀನುಗಳ ಕಡ್ಡಿಗೆ ಬೇಡಿಕೆ ಕಡಿಮೆಯಿದ್ದು, ಅಂತಹ ರೈತರು ಆರ್ಥಿಕ ಸಂಕಷ್ಟ ಎದುರಿಸುತ್ತಿದ್ದಾರೆ. ಉತ್ತಮ ಬೆಳೆ ಪಡೆದ ಕೆಲ ರೈತರಿಗೆ ಮಾತ್ರ ಹೆಚ್ಚಿನ ಬೆಲೆ ದೊರೆತಿದೆ.

# ಚೆಕ್ ಬೌನ್ಸ ಅದಾಲತ್: 65 ಪ್ರಕರಣ ಇತ್ಯರ್ಥ

■ ಉದಯರಶ್ಮಿ ದಿನಪತ್ರಿಕೆ

ಇಂಡಿ: ಶನಿವಾರ ನಗರದ ನ್ಯಾಯಾಲಯದಲ್ಲಿ ಉಚ್ಚನ್ಯಾಯಾಲಯದ ನಿರ್ದೇಶನದಂತೆ ಚೆಕ್ ಬೌನ್ಸ ಪ್ರಕರಣಗಳ ವಿಶೇಷ ಅದಾಲತ್ ನಡೆಸಲಾಯಿತು.

ಸದರಿ ಅದಾಲತದಲ್ಲಿ 65 ಪ್ರಕರಣಗಳಲ್ಲಿ ರಾಜಿ ಸಂಧಾನ ನಡೆಸಿ ಸುಮಾರು 50 ಲಕ್ಷಕ್ಕೂ ಅಧಿಕ ಮೊತ್ತ ಅರ್ಜಿದಾರ ಪಕ್ಷಗಾರರಿಗೆ ಜಮಾ ಮಾಡಲಾಯಿತು.

ದಿವಾಣಿ ನ್ಯಾಯಾಧೀಶ ಹಾಗೂ ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿ ಹಾಗೂ ಸದಸ್ಯ ಕಾರ್ಯದರ್ಶಿ ಕಾನೂನು ಸೇವೆಗಳ ಸಮಿತಿ ಸುನಿಲಕುಮಾರ ಎಂ.ಎಸ್, ನ್ಯಾಯವಾದಿಗಳಾದ ಪಿ.ಬಿ.ಶಿರಕನಹಳ್ಳಿ, ಶಾಂತು ನಿಂಬರಗಿಮಠ, ಎಸ್.ಬಿ. ನಿಂಬರಗಿಮಠ, ಎಂ.ಎಸ್.ಪಾಟೀಲ, ಆರ್.ಆರ್.ಕೋಳಿ, ಡಿ.ಎಸ್. ಹಾಲಕವಾಡಿ ಆರ್.ಎಸ್. ತೆಗ್ಗೆಳ್ಳಿ ಎಸ್.ಟಿ.ಗೂಗಿಹಾಳ ಎಸ್. ಕೆ ಬಂಗಾರತಳ ಮತ್ತು ಮಂಜುನಾಥ ನಾವಿ ಹಾಗೂ ನ್ಯಾಯಾಲಯದ ಸಿಬ್ಬಂದಿ ಬಿ.ಎಂ.ಲಿಂಗಸುರ, ಮಹೇಶ ಕೋತ, ಚಂದ್ರಕಾಂತ ಲಾಳಸಂಗಿ, ಸಿದ್ದು ಹಾವಳಗಿ ಮತ್ತಿತರಿದ್ದರು.



# 21ನೇ ಜಿಲ್ಲಾ ಕನ್ನಡ ಸಾಹಿತ್ಯ ಸಮ್ಮೇಳನದ ಸರ್ವಾಧ್ಯಕ್ಷ ಹ.ಮ.ಪೂಜಾರ

**ಇಂದು ಮತ್ತು ನಾಳೆ (ಜುಲೈ 21 - 22) ಸಿಂದಗಿಯಲ್ಲಿ ನಡೆಯುವ 21 ನೇ ವಿಜಯಪುರ ಜಿಲ್ಲಾ ಕನ್ನಡ ಸಾಹಿತ್ಯ ಸಮ್ಮೇಳನದ ಸರ್ವಾಧ್ಯಕ್ಷ, ಮಕ್ಕಳ ಸಾಹಿತಿ ಹ.ಮ.ಪೂಜಾರ ಕುರಿತ ವಿಶೇಷ ಲೇಖನ**

■ **ಉದಯರಶ್ಮಿ ದಿನಪತ್ರಿಕೆ**



"ಬನ್ನಿ ನಮ್ಮ ಮಕ್ಕಳಿಗೆ ಜೀವಿಸಿ " ಎಂಬ ಶಿಕ್ಷಣ ತಜ್ಞ ಫ್ರೋಬೆಲರ ಮಾತಿನಂತೆ ತಮ್ಮ ಇಡೀ ಜೀವನವನ್ನು ಮಕ್ಕಳ ಸೇವೆಗಾಗಿ ಮುಡುಪಾಗಿಟ್ಟ ಸಿಂದಗಿಯ ಚಾಚಾ ನೆಹರು ಎಂದೇ ಖ್ಯಾತರಾದ ಆದರ್ಶ ಶಿಕ್ಷಕ ಪ್ರಶಸ್ತಿ ಪುರಸ್ಕೃತರಾದ ಹಿರಿಯ ಮಕ್ಕಳ ಸಾಹಿತಿ ಹ.ಮ. ಪೂಜಾರ ಗುರುಗಳು ವೃತ್ತಿಯಿಂದ ವಿದ್ಯಾರ್ಥಿಗಳ ಅಚ್ಚುಮೆಚ್ಚಿನ ಆದರ್ಶ ಶಿಕ್ಷಕರಾಗಿ ಪ್ರವೃತ್ತಿಯಿಂದ ಮಕ್ಕಳ ಸಾಹಿತಿಗಳಾಗಿ ಅನುಕರಣೀಯ, ಆದರ್ಶ ಮತ್ತು ಮೌಲ್ಯಯುತ ಬದುಕನ್ನು ಬದುಕಿದವರು. 'ಮಕ್ಕಳ ಸಾಹಿತಿಗಳ ತೊಟ್ಟಿಲು' ಎಂದು ಕರೆಸಿಕೊಳ್ಳುವ ವಿಜಯಪುರ ಜಿಲ್ಲೆಯ ಮಕ್ಕಳ ಸಾಹಿತಿಗಳಲ್ಲಿ ಎದ್ದು ಕಾಣುವಂತ ಆಕರ್ಷಕ ವ್ಯಕ್ತಿತ್ವ ಹ. ಮ. ಪೂಜಾರ ಗುರುಗಳದು. ಇದೇ ಜುಲೈ 21 ಮತ್ತು 22 ರಂದು ಸಿಂದಗಿಯ ಎಚ್.ಜಿ.ಕಾಲೇಜಿನ ಆವರಣದಲ್ಲಿ ಜರುಗಲಿರುವ 21ನೇ ಜಿಲ್ಲಾ ಕನ್ನಡ ಸಾಹಿತ್ಯ ಸಮ್ಮೇಳನದ ಸರ್ವಾಧ್ಯಕ್ಷರ ಗೌರವ ಸ್ಥಾನ ಲಭಿಸಿದ್ದು ಜಿಲ್ಲೆಯ ಸಾಹಿತ್ಯ ಬಳಗದಲ್ಲಿ ಹರ್ಷವನ್ನುಂಟು ಮಾಡಿದೆ. ಇದೇ ವರ್ಷವೇ ಕರ್ನಾಟಕ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತರಾದ ಶ್ರೀಯುತರಿಗೆ ವಿಜಯಪುರ ಜಿಲ್ಲಾ ಕನ್ನಡ ಸಾಹಿತ್ಯ ಸಮ್ಮೇಳನದ ಸರ್ವಾಧ್ಯಕ್ಷ ಸ್ಥಾನ ಒಲಿದು ಬಂದಿರುವುದು ಬಯಸದೇ ಬಂದ ಭಾಗ್ಯ ಹಾಗೂ ಅವರ ಮಕ್ಕಳ ಸಾಹಿತ್ಯ ಸೇವೆಗೆ ಸಂದ ಗೌರವವಾಗಿದೆ. ಅತ್ಯಂತ ಸೂಕ್ತ ಅರ್ಹ ಸಮರ್ಥ ವ್ಯಕ್ತಿಗಳನ್ನು ಸರ್ವಾಧ್ಯಕ್ಷರನ್ನಾಗಿ ಆಯ್ಕೆ ಮಾಡಿದ ಅವರ ಶಿಷ್ಯ ಬಳಗ ಜಿಲ್ಲಾ ಮತ್ತು ತಾಲೂಕ ಕನ್ನಡ ಸಾಹಿತ್ಯ ಪರಿಷತ್ತಿನ ಪದಾಧಿಕಾರಿಗಳು ಅಭಿನಂದನಾರ್ಹರಾಗಿದ್ದಾರೆ. ತನ್ನಿಮಿತ್ಯ ಹ.ಮ. ಪೂಜಾರ ಗುರುಗಳನ್ನು ಪರಿಚಯಿಸುವುದು ಪ್ರಸ್ತುತ ಲೇಖನದ ಉದ್ದೇಶವಾಗಿದೆ.

ಹ .ಮ. ಪೂಜಾರ ಗುರುಗಳ ಪೂರ್ಣ ಹೆಸರು ಹಣಮಂತರಾಯ ಮನ್ನಪ್ಪ ಪೂಜಾರ. ಅವರು 3 ನೇ ಮಾರ್ಚ್ 1943ರಲ್ಲಿ ಸಿಂದಗಿಯ ಮನ್ನಪ್ಪ ಮತ್ತು ಗುರುಬಾಯಿ ಅವರ ಪುಣ್ಯ ಉದರದಲ್ಲಿ ಬೊಮ್ಮನಹಳ್ಳಿ ಎಂಬ ಗ್ರಾಮದಲ್ಲಿ ಜನಿಸಿದರು. ತಂದೆ ಮನ್ನಪ್ಪ ಮಾಸ್ತರ ಅವರು ಆಲಮೇಲದಲ್ಲಿ ಪ್ರಾಥ–'ಮಿಕ ಶಾಲಾ ಶಿಕ್ಷಕರಾಗಿದ್ದರಿಂದ ಹ. ಮ.ಪೂಜಾರ ಗುರುಗಳ ಪ್ರಾಥಮಿಕ ಶಿಕ್ಷಣ ಆಲಮೇಲದಲ್ಲಿಯೇ ಆಯಿತು. ಪ್ರೌಢಶಾಲೆಯನ್ನು ಸಿಂದಗಿ ಎಚ್. ಜಿ. ಪ್ರೌಢಶಾಲೆಯಲ್ಲಿ ಕಲಿತು ನಂತರ ಬಿ.ಎ. ಬಿ.ಎಡ್ ಪದವಿ ಮುಗಿಸಿ, 1961 ರಲ್ಲಿ ತಮ್ಮ ಶಿಕ್ಷಕ ವೃತ್ತಿಯನ್ನು ಆರಂಭಿಸಿದರು. 1993ರಲ್ಲಿ ಪ್ರೌಢಶಾಲಾ ಶಿಕ್ಷಕರಾಗಿ ಪದೋನ್ನತಿ ಹೊಂದಿ ನಂತರ ಪ್ರೌಢಶಾಲೆಯ ಮುಖ್ಯಾಧ್ಯಾಪಕರಾಗಿ ತಮ್ಮ ಅಮೂಲ್ಯ ಸೇವೆಯನ್ನು ಗೈದಿದ್ದಾರೆ. ಪ್ರಾಥಮಿಕ ಶಾಲಾ ಶಿಕ್ಷಕರಾಗಿ ಪ್ರೌಢಶಾಲಾ ಶಿಕ್ಷಕರಾಗಿ ನೂರಾರು ವಿದ್ಯಾರ್ಥಿಗಳ ಬಾಳನ್ನು ಬೆಳಗಿದ ಹ.ಮ. ಪೂಜಾರ ಗುರುಗಳು ಶಿಕ್ಷಕ ವೃತ್ತಿ ನಿರತ ನಮ್ಮೆಲ್ಲರಿಗೆ ಆದರ್ಶಪ್ರಾಯರಾಗಿದ್ದಾರೆ.

ಶಿಕ್ಷಕರಿಗೆ ಕಲಿಸುವ ವಿಷಯದಲ್ಲಿ ಪ್ರಭುತ್ವ, ವೃತ್ತಿಯ ಬಗ್ಗೆ ಬದ್ಧತೆ ಹಾಗೂ ವಿದ್ಯಾರ್ಥಿಗಳ ಬಗ್ಗೆ ಅಪಾರ ಪ್ರೀತಿ ಅಗತ್ಯ ಎನ್ನುವ ಹ.ಮ. ಪೂಜಾರ ಗುರುಗಳು ಈ ಮೂರು ಗುಣಗಳನ್ನು ಹೊಂದಿ ತಮ್ಮ ವೃತ್ತಿ ಜೀವನದ ಉದ್ದಕ್ಕೂ ಅನುಸರಿಸಿಕೊಂಡು ಬದುಕಿದವರು. " ಮಕ್ಕಳೇ ದೇವರು, ಶಾಲೆಯೇ ದೇವಾಲಯ, ಶಿಕ್ಷಕರೇ ಪೂಜಾರಿ" ಗಳೆಂಬ ಬಂಥನಾಳ ಶಿವಯೋಗಿಗಳ ವಾಣಿಯನ್ನು ಅಕ್ಷರಶಃ ಅರಿತು ಮಕ್ಕಳ ಏಳಿಗೆಗಾಗಿ ಹಗಲಿರುಳು ಶ್ರಮಿಸಿದ್ದಾರೆ. ತಮ್ಮ ಬೋಧನೆಯಲ್ಲಿ ನಾವಿನ್ಯತೆಯನ್ನು ಅಳವಡಿಸಿಕೊಂಡು ಸೃಜನಾತ್ಮಕವಾಗಿ ಸಮರ್ಥ ಬೋಧನೆ ಮಾಡಿ ಸಾವಿರಾರು ವಿದ್ಯಾರ್ಥಿಗಳ ಮೆಚ್ಚುಗೆಗೆ ಪಾತ್ರರಾಗಿದ್ದಾರೆ. ತಮ್ಮ ವೃತ್ತಿ ಜೀವನದ ಉದ್ದಕ್ಕೂ ನಿರಂತರ ವ್ಯಾಪಕ ಮೌಲ್ಯಮಾಪನದ ಮೂಲಕ ಮಕ್ಕಳ ಕಲಿಕಾ ದೋಷಗಳನ್ನು ಗುರುತಿಸಿ ಅವರಿಗೆ ಸೂಕ್ತ ಮಾರ್ಗದರ್ಶನ ನೀಡುವುದರ ಮೂಲಕ ಮಕ್ಕಳನ್ನು ಪರಿಪೂರ್ಣ ವ್ಯಕ್ತಿಗಳನ್ನಾಗಿ ರೂಪಿಸಿದ್ದಾರೆ. ಅವರು ಮುಖ್ಯ ಅಧ್ಯಾಪಕರಾಗಿದ್ದಾಗ ಪಾಠೋಪಕರಣಗಳನ್ನು ಬಳಸಿಕೊಂಡು ಪರಿಣಾಮಕಾರಿಯಾಗಿ ಬೋಧನೆ ಮಾಡುವಂತಹ ಶಿಕ್ಷಕರನ್ನು ಗುರುತಿಸಿ ಅವರಿಗೆ ಬಹುಮಾನ ನೀಡಿ ಪ್ರೋತ್ಸಾಹಿಸಿದ್ದಾರೆ .ಪ್ರತಿ ತಿಂಗಳ ಕೊನೆಯ ದಿನ ಶಿಕ್ಷಕರಿಂದ ಮಾದರಿ ಪಾಠ ಕೊಡಿಸಿ ಬೋಧನೆಯನ್ನು ಪುನಶ್ಚೇತನ ಗೊಳಿಸಿದ್ದಾರೆ.



ತಮ್ಮ ವೃತ್ತಿ ಜೀವನ ಉದ್ದಕ್ಕೂ ನಿರಂತರವಾಗಿ ಮಕ್ಕಳ ಪ್ರತಿಭಾ ಪ್ರದರ್ಶನ ಹಾಗೂ ಪ್ರತಿಭಾ ಪುರಸ್ಕಾರಗಳನ್ನು ಹಮ್ಮಿಕೊಂಡು ಮಕ್ಕಳಲ್ಲಿನ ಸೂಕ್ತ ಪ್ರತಿಭೆಗಳನ್ನು ಅನಾವರಣಗೊಳಿಸಿದ್ದಾರೆ. ಮಕ್ಕಳಲ್ಲಿ ಓದುವ ಅಭಿರುಚಿ ಬೆಳೆಸುವ ಉದ್ದೇಶದಿಂದ ಓದಿ ಕಲಿ, ಹಾಡಿನಲಿ ಎಂಬ ಕಾರ್ಯಕ್ರಮದ ಮೂಲಕ ಕೃತಿಯ ಲೇಖಕರೊಂದಿಗೆ ಮುಕ್ತ ಸಂವಾದಕ್ಕೆ ಅವಕಾಶ ನೀಡಿ . ಮಕ್ಕಳಲ್ಲಿ ಸಂವಹನ ಕೌಶಲ್ಯ ವೇದಿಕೆ ಧೈರ್ಯ ಮತ್ತು ಆತ್ಮವಿಶ್ವಾಸವನ್ನು ಬೆಳೆಸಿದ್ದಾರೆ. ಪಠ್ಯೇತರ ಚಟುವಟಿ–ಕೆಗಳ ಮೂಲಕ ಚಟುವಟಿಕೆಗಳ ಮೂಲಕ ಮಕ್ಕಳ ಸಮಗ್ರ ವ್ಯಕ್ತಿತ್ವವನ್ನು ವಿಕಾಸಗೊಳಿಸಿದ್ದಾರೆ. ವಿದ್ಯಾರ್ಥಿಗಳಲ್ಲಿ ಓದಿನ ಅಭಿರುಚಿ ಬೆಳೆಸಲು "ಪುಸ್ತಕ ಸಂಸ್ಕೃತಿ" ಎಂಬ ವಿನೂತನ ಕಾರ್ಯಕ್ರಮದ ಮೂಲಕ 2015 ರಿಂದ ಪ್ರತಿ ವರ್ಷ "ಹವ್ಯಾಸಿ ಓದುಗ" ಪ್ರಶಸ್ತಿಯನ್ನು ನೀಡಿ ಗೌರವಿಸುತ್ತಿದ್ದಾರೆ. ಗುಣಾತ್ಮಕ ಶಿಕ್ಷಣಕ್ಕಾಗಿ ಶಿಕ್ಷಕರ ಗುಣಮಟ್ಟ ಹೆಚ್ಚಿಸುವುದ ಅಗತ್ಯವೆಂದು ಭಾವಿಸಿದ ಹ.ಮ. ಪೂಜಾರ ಗುರುಗಳು ಸೇವಾ ನಿರತ ಶಿಕ್ಷಕ–ರಿಗಾಗಿ ಮತ್ತು ಭಾವಿ ಶಿಕ್ಷಕರಾಗಲಿರುವ ಬಿ.ಎಡ್. ಪ್ರಶಿಕ್ಷಣಾರ್ಥಿಗಳಿಗೆ ಶೈಕ್ಷಣಿಕ ಉಪನ್ಯಾಸ ಮಾಲೆ ಮತ್ತು ಶೈಕ್ಷಣಿಕ ವಿಚಾರ ಸಂಕೀರ್ಣಗಳನ್ನು ಏರ್ಪಡಿಸಿ ಶಿಕ್ಷಣದ ಗುಣಮಟ್ಟವನ್ನು ಹೆಚ್ಚಿಸುವಲ್ಲಿ ಶ್ರಮಿಸಿದ್ದಾರೆ. ಮಕ್ಕಳ ಸರ್ವಾಂಗೀಣ ಅಭಿವೃದ್ಧಿಗಾಗಿ 1976ರಲ್ಲಿ ಮಕ್ಕಳ ಬಳಗವನ್ನು ಹುಟ್ಟುಹಾಕಿದ ಹ.ಮ. ಪೂಜಾರ ಗುರುಗಳು ವೈವಿಧ್ಯಮಯ ಕಾರ್ಯಕ್ರಮಗಳಾದ ಮನೆಯಂಗಳದಲ್ಲಿ ಚಿಲಿಪಿಲಿ, ಶಾಲಾವರಣದಲ್ಲಿ ಮಕ್ಕಳ ಕಲರವ, ಚಿಣ್ಣರ ನುಡಿಸಿರಿ, ಮಕ್ಕಳ ಹಬ್ಬ, ಮಕ್ಕಳ ಮೇಳ, ವಿಜ್ಞಾನ ಮೇಳ, ಮಕ್ಕಳ ಸಮ್ಮೇಳನ, ಬಿಡುವಿನ ಮನೆ, ವ್ಯಕ್ತಿತ್ವ ವಿಕಸನ ಶಿಬಿರ ಮುಂತಾದ ರಚನಾತ್ಮಕ ಕಾರ್ಯಕ್ರಮಗಳ ಮೂಲಕ ಮಕ್ಕಳ ವ್ಯಕ್ತಿತ್ವವನ್ನು ವಿಕಸನಗೊಳಿಸಿದ್ದಾರೆ. ಮಕ್ಕಳಿಂದ, ಮಕ್ಕಳ, ಮಕ್ಕಳಿಗೋಸ್ಕರ ಹಮ್ಮಿಕೊಂಡ ಅವರ ಎಲ್ಲ ಕಾರ್ಯಕ್ರಮಗಳ ಕೇಂದ್ರಬಿಂದು ಮಕ್ಕಳೇ ಎಂಬುದು ವಿಶೇಷ. ತನ್ಮೂಲಕ ಪೂಜಾರ ಗುರುಗಳು ಮಕ್ಕಳ ಭಾಗವಹಿಸುವ ಮತ್ತು ಅಭಿವ್ಯಕ್ತಿ ಪಡಿಸುವ ಹಕ್ಕಿನ ಅವಕಾಶವನ್ನು ಮಕ್ಕಳಿಗೆ ಒದಗಿಸುವುದರ ಮೂಲಕ ಮಕ್ಕಳ ಹಕ್ಕುಗಳ ಜಾಗೃತಿಯನ್ನು ಪ್ರಾಯೋಗಿಕವಾಗಿ ಮಾಡಿದ್ದಾರೆ. ವೃತ್ತಿಯಿಂದ ಆದರ್ಶ ಶಿಕ್ಷಕರಾದ ಹಮ ಪೂಜಾರ ಗುರುಗಳು ಪ್ರವೃತ್ತಿಯಿಂದ ಖ್ಯಾತ ಮಕ್ಕಳ ಸಾಹಿತಿಗಳಾಗಿದ್ದಾರೆ. ವಿದ್ಯಾಚೇತನ ಪ್ರಕಾಶನ ಸಂಸ್ಥೆಯನ್ನು ಪ್ರಾರಂಭಿಸಿ ಮಕ್ಕಳಿಗೆ ಉತ್ತಮ ಸಂಸ್ಕಾರ ನೀಡುವದಕ್ಕಾಗಿ ಅನೇಕ ಮೌಲಿಕ ಕೃತಿಗಳನ್ನು ಸ್ವತಃ ಬರೆದು ಪ್ರಕಟಿಸಿದ್ದಾರೆ. ಅವರು ಬರೆದ ಪ್ರಮುಖ ಕೃತಿಗಳೆಂದರೆ ನೀತಿಯ ಬದುಕು, ಪರೋಪಕಾರ, ತುಂಟ ಮಂಗ, ಮಕ್ಕಳ ಧಾಮ, ಯಾರು ಜಾಣ–ರು?, ಚತುರ ಚಿಣ್ಣರು, ಮುಂತಾದವು ಅವರ ಪ್ರಮುಖ ಕಥಾ ಸಂಕಲನಗಳಾದರೆ,ಪರಿಸರ, ಗುಬ್ಬಚ್ಚಿ, ಮಕ್ಕಳ ಕವನ ಸಂಕಲನಗಳಾಗಿವೆ . ನಮಸ್ಕಾರ ಪುನಃ ಬನ್ನಿ ಮತ್ತು ಕೆಮ್ಮಿನ ಔಷಧಿ ಉಚಿತ ಇವು ಅವರ ನಗೆ ಹನಿಗಳ ಸಂಕಲನಗಳಾಗಿವೆ . ಕಾಯಕಯೋಗಿ ಶ್ರೀ ಚನ್ನವೀರ ಸ್ವಾಮೀಜಿ ಗೋಲಗೇರಿಯ ಗೊಲ್ಲಾಳೇಶ್ವರ ಅವರು ರಚಿಸಿದ ಜೀವನ ಚರಿತ್ರೆಗಳಾಗಿವೆ . ಚಿಣ್ಣರ ಚೇತನ, ಅಜ್ಜನ ಮನೆಯ ಅಂಗಳದಲ್ಲಿ ಅವರ ಮಕ್ಕಳ ಕಾದಂಬರಿಗಳಾಗಿವೆ . ರಸ ಕಿರಣ,ವಿಜಯವಾಣಿ, ಚಿಣ್ಣ ರ ಚೇತನ, ಪಂಚಾಕ್ಷರಿ ಪ್ರಭೆ, ಪುಟ್ಟ ಕಾಣಿಕೆ,ಸುವರ್ಣ ಸಂಭ್ರಮ, ಮಕ್ಕಳ ಸಾಹಿತ್ಯ ಚಿಂತನ ಇವು ಪೂಜಾರ ಗುರುಗಳ ಸಂಪಾದಿತ ಕೃತಿಗಳಾಗಿವೆ . ಹೀಗೆ ಹ.ಮ. ಪೂಜಾರಗುರುಗಳು ಮಕ್ಕಳಿಗಾಗಿ ಕಥೆ, ಕವನ, ಕಾದಂಬರಿ,ಹಾಸ್ಯ, ಜೀವನ ಚರಿತ್ರೆ, ಸಂಪಾದನೆಗಳಲ್ಲಿ ಮಕ್ಕಳ ಸಾಹಿತ್ಯದ ಕೃಷಿಗೈದು ಮಕ್ಕಳ ಸಾಹಿತ್ಯ ಪ್ರೌಢ ಸಾಹಿತ್ಯದಂತೆ ಸಮೃದ್ಧ ಮತ್ತು ವೈವಿಧ್ಯತೆಯನ್ನು ಹೊಂದಿದೆ ಎಂಬುದನ್ನು ಸಾಬೀತುಪಡಿಸಿದ್ದಾರೆ. ಶ್ರೀಯುತರ ಅನೇಕ ಕವನಗಳು ಮತ್ತು ಮಕ್ಕಳ ಕಥೆ–'ಗಳು ಕರ್ನಾಟಕ ಮತ್ತು ಮಹಾರಾಷ್ಟ್ರದ ಕನ್ನಡ ಪಠ್ಯಪುಸ್ತಕದಲ್ಲಿ ಪಠ್ಯವಾಗಿ ಪ್ರಕಟಗೊಂಡಿರುವುದು ಹ. ಮ.ಪೂಜಾರ ಅವರ ಗುಣಾತ್ಮಕ ಮಕ್ಕಳ ಸಾಹಿತ್ಯಕ್ಕೆ ಸಾಕ್ಷಿಯಾಗಿದೆ. ಹ. ಮ. ಪೂಜಾರ ಗುರುಗಳ ಅನುಭವ ಮತ್ತು ಅಮೂಲ್ಯ ಸೇವೆಯನ್ನು ಪರಿಗಣಿಸಿ ಅವರನ್ನು ಸಾಕ್ಷರತಾ ಪಠ್ಯ ರಚನಾ ಸಮಿತಿಯ ಸದಸ್ಯರನ್ನಾಗಿ ಆರನೇ ತರಗತಿಯ ದ್ವಿತೀಯ ಭಾಷಾ ಕನ್ನಡ ಪಠ್ಯ ರಚನಾ ಸಮಿತಿಯ ಸದಸ್ಯರನ್ನಾಗಿ ನೇಮಿಸಲಾಗಿ–ತ್ತು . ಸಿಂದಗಿ ತಾಲೂಕ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾಗಿ, ಗೌರವ ವನ್ಯಜೀವಿ ಪರಿಪಾಲಕರಾಗಿ, ಮಕ್ಕಳ ಕಲ್ಯಾಣ ಸಮಿತಿಯ ಅಧ್ಯಕ್ಷರಾಗಿ, ವಿಜಯಪುರ ಜಿಲ್ಲಾ ಮಕ್ಕಳ ಸಾಹಿತ್ಯ ಸಂಗಮದ ಅಧ್ಯಕ್ಷರಾಗಿ ಸೇವೆ ಸಲ್ಲಿಸಿ ಪ್ರಸ್ತುತ ಗೌರವ ಅಧ್ಯಕ್ಷರಾಗಿ ಕಾರ್ಯ ನಿರ್ವಹಿಸುತ್ತಿದ್ದಾರೆ. ನಮ್ಮೂರು ಮಕ್ಕಳ ಧಾಮದ ಮಹಾಪೋಷಕರಾಗಿ ಮಕ್ಕಳ ಸೇವೆಗೈ ಯುತ್ತಿದ್ದಾರೆ. ಹ. ಮ. ಪೂಜಾರ ಗುರುಗಳು ಪ್ರಶಸ್ತಿ ಪುರಸ್ಕಾರಗಳಿಗಾಗಿ ಎಂದು ಕೆಲಸ ಮಾಡಿದವರಲ್ಲ. ಮಕ್ಕಳ ಸಾಹಿತ್ಯ ಸೇವೆ ಅವರ ಒಂದು ಸಹಜ ಹವ್ಯಾಸವಾಗಿದೆ. ಅವರ ಅನುಪಮ ಮಕ್ಕಳ ಸಾಹಿತ್ಯ ಸೇವೆಯಿಂದಾಗಿ ಅನೇಕ ಪ್ರಶಸ್ತಿ ಪುರಸ್ಕಾರಗಳು ಅವರನ್ನು ಹುಡುಕಿಕೊಂಡು ಬಂದಿವೆ. ಕರ್ನಾಟಕ ಸರ್ಕಾರವು 1998ರಲ್ಲಿ ಆದರ್ಶ ಶಿಕ್ಷಕ ರಾಜ್ಯ ಪ್ರಶಸ್ತಿ, ಭಾರತ ಸರ್ಕಾರವು 2010ರಲ್ಲಿ ಆದರ್ಶ ಶಿಕ್ಷಕ ರಾಷ್ಟ್ರ ಪ್ರಶಸ್ತಿಯನ್ನು ನೀಡಿ ಗೌರವಿಸಿವೆ. ಕರ್ನಾಟಕ ಸರಕಾರವು 2014ರಲ್ಲಿ ಹಿರಿಯ ನಾಗರಿಕ ಪ್ರಶಸ್ತಿ ಮತ್ತು ಬಾಲ ವಿಕಾಸ ಅಕಾಡೆಮಿ ಗೌರವ ಪ್ರಶಸ್ತಿ ನೀಡಿ ಗೌರವಿಸಿವೆ. ಇದೇ ವರ್ಷ ಅವರು ಕರ್ನಾಟಕ ರಾಜ್ಯೋತ್ಸವ ಪ್ರಶಸ್ತಿಗೆ ಭಾಜನರಾಗಿದ್ದು, ಸದ್ಯಕ್ಕೆ 21ನೇ ಕನ್ನಡ ಸಾಹಿತ್ಯ ಸಮ್ಮೇಳನದ ಸರ್ವಾಧ್ಯಕ್ಷರಾಗಿದ್ದು ಅವರ ಆದರ್ಶ ವ್ಯಕ್ತಿತ್ವಕ್ಕೆ ಹಿಡಿದ ಕನ್ನಡಿ ಯಾಗಿದೆ. ಹ.ಮ. ಪೂಜಾರ ಗುರುಗಳಿಗೆ ಸದ್ಯಕ್ಕೆ 85 ವರ್ಷಗಳಾಗಿವೆ . ಆದರೂ ಸಹ ಯಾವುದೇ ಮಕ್ಕಳ ಸಭೆ ಸಮಾರಂಭಗಳಿದ್ದರೆ ಅವರು ಯುವಕರಂತೆ ಅತ್ಯಂತ ಕ್ರಿಯಾಶೀಲರಾಗಿ ಭಾಗವಹಿಸುತ್ತಾರೆ. ಅವರ ದೇಹಕ್ಕೆ ವಯಸ್ಸಾಗಿದೆಯೇ ವಿನಹ ಅವರ ಮನಸ್ಸು ಉತ್ಸಾಹದ ಚಿಲುಮೆಯಾಗಿದೆ.ಇಂದಿನ ಶಿಕ್ಷಕರು ಹ.ಮ. ಪೂಜಾರ ಗುರುಗಳಂತೆ ಸರಳತೆಯನ್ನು ಮೈಗೂಡಿಸಿಕೊಂಡು ಮಕ್ಕಳೊಂದಿಗೆ ಮಕ್ಕಳಾಗಿ ಶಿಕ್ಷಕ ವೃತ್ತಿಯನ್ನು ಪ್ರೀತಿಯಿಂದ ಸಾರ್ಥಕ ಮಾಡಿಕೊಳ್ಳ ಬೇಕೆಂಬುದೇ ಅವರ ಜೀವನ ಸಂದೇಶವಾಗಿದೆ. ವಿಜಯಪುರ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ಇಂದು ಸಿಂದಗಿ ಎಚ್ . ಜಿ. ಕಾಲೇಜಿನ ಆವರಣದಲ್ಲಿ ಜರುಗಲಿರುವ 21ನೇ ಜಿಲ್ಲಾ ಕನ್ನಡ ಸಾಹಿತ್ಯ ಸಮ್ಮೇಳನದ ಸರ್ವಾಧ್ಯಕ್ಷರನ್ನಾಗಿ ಆಯ್ಕೆ ಮಾಡಿ ಗೌರವಿಸಿದ್ದು ಅಖಂಡ ಬಿಜಾಪುರ ಜಿಲ್ಲೆಗೆ ಆನಂದವಾಗಿದೆ. ಹ.ಮ. ಪೂಜಾರ ಗುರುಗಳಿಗೆ ಭಗವಂತ ಆಯುರಾರೋಗ್ಯ ಭಾಗ್ಯ ಕರುಣಿಸಲಿ ಅವರ ಮಕ್ಕಳ ಸಾಹಿತ್ಯ ಸೇವೆ ನಿರಂತರವಾಗಿ ಸಾಗಿ ಶತಾಯುಷ್ಯ ಪೂರೈಸಲಿ ಎಂದು ವಿಜಯಪುರ ಜಿಲ್ಲಾ ಮಕ್ಕಳ ಸಾಹಿತ್ಯ ಸಂಗಮದ ಬಳಗವು ಈ ಸಂದರ್ಭದಲ್ಲಿ ಶುಭ ಹಾರೈಸುತ್ತದೆ.



ಲೇಖಕ
■ **ಎ.ಆರ್. ಹೆಗ್ಗನದೊಡ್ಡಿ**
ಅಧ್ಯಕ್ಷರು, ಜಿಲ್ಲಾ ಮಕ್ಕಳ ಸಾಹಿತ್ಯ ಸಂಗಮ
ವಿಜಯಪುರ

# ಲಿಫ್ಟ್ ಆಪರೇಟರ್ ಹುದ್ದೆಗಳಿಗೆ ಕಡ್ಡಾಯವಾಗಿ ಅಂಗವಿಕಲರನ್ನು ನೇಮಿಸಿ



■ **ಉದಯರಶ್ಮಿ ದಿನಪತ್ರಿಕೆ**

**ವಿಧಾನ ಪರಿಷತ್ ಶಾಸಕ ಸುನೀಲಗೌಡ ಅವರ ಪ್ರಸ್ತಾವಕ್ಕೆ ನಗರಾಭಿವೃದ್ಧಿ ಪ್ರಾಧಿಕಾರದ ಸಭೆಯಲ್ಲಿ ಒಪ್ಪಿಗೆ**

ವಿಜಯಪುರ: ಲಿಫ್ಟ್ ಆಪರೇಟರ್ ಹುದ್ದೆಗಳಿಗೆ ಕಡ್ಡಾಯವಾಗಿ ಅಂಗವಿಕಲರನ್ನು ನೇಮಿಸಬೇಕು ಎಂದು ವಿಧಾನ ಪರಿಷತ ಶಾಸಕ ಸುನೀಲಗೌಡ ಮಾಡಿದ ಪ್ರಸ್ತಾವಕ್ಕೆ ನಗರಾಭಿವೃದ್ಧಿ ಪ್ರಾಧಿಕಾರದ ಸಭೆಯಲ್ಲಿ ಒಪ್ಪಿಗೆ ಸೂಚಿಸಲಾಯಿತು.

ಸೋಮವಾರ ನಗರಾಭಿವೃದ್ಧಿ ಪ್ರಾಧಿಕಾರದಲ್ಲಿ ನಡೆದ ಸಭೆಯಲ್ಲಿ ಮಾತನಾಡಿದ ಸುನೀಲಗೌಡ ಪಾಟೀಲ, ಮುಂಬರುವ ವಿಧಾನ ಪರಿಷತ ಅಧಿವೇಶನದಲ್ಲಿಯೂ ಈ ಕುರಿತು ಸರಕಾರಕ್ಕೆ ಮನವಿ ಮಾಡುವುದಾಗಿ ತಿಳಿಸಿದರು. ವಸತಿ ಸಮುಚ್ಚಯಗಳು, ವಾಣಿಜ್ಯ ಸಂಕೀರ್ಣಗಳು, ಆಸ್ಪತ್ರೆಗಳು, ಮಾಲ್‌ಗಳು ಸೇರಿದಂತೆ ಬಹುಮಹಡಿ ಕಟ್ಟಡಗಳಲ್ಲಿ ಲಿಫ್ಟ್ ಬಳಸಲಾಗುತ್ತದೆ. ಈ ಲಿಫ್ಟ್ ಆಪರೇಟರ್ ಹುದ್ದೆಗಳಿಗೆ ಕಡ್ಡಾಯವಾಗಿ ಅಂಗವಿಕಲರನ್ನೇ ನೇಮಕಾತಿ ಮಾಡಬೇಕು. ಇದರಿಂದ ಅವರಿಗೆ ಉದ್ಯೋಗ ಸಿಕ್ಕಂತಾಗುತ್ತದೆ. ಅಲ್ಲದೇ, ಅವರಿಗೆ ಕೆಲಸ ಭಾರ ಎನಿಸುವುದಿಲ್ಲ. ಅಂಗವಿಕಲರು ಸ್ವಾಭಿಮಾನದಿಂದ ಬದಕಲು ಇದರಿಂದ ಅವಕಾಶ ನೀಡಿದಂತಾಗುತ್ತದೆ ಎಂದು ಅವರು ಹೇಳಿದರು.

ಬೆಂಗಳೂರು ಸೇರಿದಂತೆ ನಾನಾ ಮಹಾನಗರಗಳಲ್ಲಿ ಅಂಗವಿಕಲರು ಲಿಫ್ಟ್ ಆಪರೇಟ್ ಮಾಡುವುದನ್ನು ಸ್ವತಃ ನೋಡಿದ್ದೇವೆ. ಅಷ್ಟೇ ಅಲ್ಲ, ಅವರು ಲಿಫ್ಟ್ ಗಳನ್ನು ಸ್ವಚ್ಛವಾಗಿಟ್ಟಿರುತ್ತಾರೆ. ಜೊತೆಗೆ ಎಲ್ಲರೊಂದಿಗೂ ಸಮಾಧಾನದಿಂದ ನಡೆದುಕೊಳ್ಳುತ್ತಾರೆ. ವಿಜಯಪುರ ಜಿಲ್ಲೆಯಿಂದಲೇ ಪ್ರಾರಂಭವಾಗುವ ಈ ಸಮಾಜಮುಖಿ ಕೆಲಸ ರಾಜ್ಯ ಮತ್ತು ರಾಷ್ಟ್ರೀಯ ಮಟ್ಟದಲ್ಲೂ ವಿಸ್ತರಣೆಯಾಗುವ ವಿಶ್ವಾಸವಿದೆ ಎಂದು ಶಾಸಕ ಸುನೀಲಗೌಡ ಪಾಟೀಲ ಹೇಳಿದರು. ಈ ಸಭೆಯಲ್ಲಿ ಶಾಸಕ ಬಸನಗೌಡ ಪಾಟೀಲ ಯತ್ನಾಳ, ವಿಠ್ಠಲ ಧೋಂಡಿಬಾ ಕಟಕದೊಂಡ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಡಾ. ಗಂಗಾಧರ ಸಂಬಣ್ಣಿ, ಪ್ರಾಧಿಕಾರದ ಆಯುಕ್ತ ರಾಜಶೇಖರ ಡಂಬಳ, ಮಹಾನಗರ ಪಾಲಿಕೆ ಆಯುಕ್ತ ವಿಜಯಕುಮಾರ ಮೆಕ್ಕಳಕಿ ಸೇರಿದಂತೆ ನಾನಾ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

# ಮೋಹನ ಕುಲಕರ್ಣಿ ನೇಮಕ

■ **ಉದಯರಶ್ಮಿ ದಿನಪತ್ರಿಕೆ**



ವಿಜಯಪುರ: ಕರ್ನಾಟಕ ಸರ್ಕಾರದಿಂದ ಮಾನ್ಯತೆ ಪಡೆದಿರುವ ಕರ್ನಾಟಕ ಸಣ್ಣ ಮತ್ತು ಜಿಲ್ಲಾ ಪತ್ರಿಕೆಗಳ ಸಂಘ (ರಿ)ದ ರಾಜ್ಯ ಪ್ರಧಾನ ಕಾರ್ಯದರ್ಶಿಯನ್ನಾಗಿ ಮೋಹನ ಕುಲಕರ್ಣಿಯವರನ್ನು ನೇಮಕ ಮಾಡಲಾಗಿದೆ ಎಂದು ಸಂಘದ ರಾಜ್ಯ ಅಧ್ಯಕ್ಷ ಎಸ್. ಮಂಜುನಾಥ ನೇಮಕ ಮಾಡಿ ಆದೇಶಿಸಿದ್ದಾರೆ.

ರಾಜ್ಯದಲ್ಲಿ ಸಂಘದ ಬೆಳವಣಿಗೆಗೆ ತಮ್ಮನ್ನು ತಾವು ತೊಡಗಿಸಿಕೊಳ್ಳಬೇಕೆಂದು ಹಾಗೂ ಸಂಘದ ಪದಾಧಿಕಾ–ರಿಗಳೊಂದಿಗೆ ನಿಕಟ ಸಂಪರ್ಕ ಇಟ್ಟುಕೊಂಡು ಎಲ್ಲರನ್ನು ಪರಿಗಣನೆಗೆ ತೆಗೆದುಕೊಂಡು ಸಂಘದ ಜವಾಬ್ದಾರಿಯನ್ನು ವಹಿಸಿಕೊಳ್ಳಬೇಕೆಂದು ಅಧ್ಯಕ್ಷ ಎಸ್.ಮಂಜುನಾಥ ಸೂಚಿಸಿದ್ದಾರೆ.

# ಮಾನವೀಯ ಮೌಲ್ಯಗಳನ್ನು ಬಿತ್ತಿದ ಕನಕದಾಸರು : ದೇಸಾಯಿ

■ **ಉದಯರಶ್ಮಿ ದಿನಪತ್ರಿಕೆ**



ಕಲಬುರ್ಗಿ: ಯಡ್ರಾಮಿ ಪಟ್ಟಣದ ಕದಂಬ ಪಿ.ಯು. ಕಾಲೇಜಿನಲ್ಲಿ ಕಾಗಿನೆಲೆ ಅಭಿವೃದ್ಧಿ ಪ್ರಾಧಿಕಾರ ಹಾಗೂ ಸಗರದ ಕಲಾನಿಕೇತನ ಟ್ರಸ್ಟ್ ಸಹಯೋಗದಲ್ಲಿ ಆಯೋಜಿಸಿದ ಕನಕ ದರ್ಶನ ಕಾರ್ಯಕ್ರಮದಲ್ಲಿ ಉಪನ್ಯಾಸ ನೀಡಿ ಮಾತನಾಡಿದ ಅವರು,

ಕನಕದಾಸರು ತಮ್ಮ ಕೀರ್ತನೆಗಳ ಮೂಲಕ ಸಮಾಜದಲ್ಲಿ ಸಮಾನತೆ, ಕರುಣೆ, ಸಹೋದರತೆ ಜೊತೆಗೆ ಮಾನವೀಯ ಮೌಲ್ಯಗಳು ಬಿತ್ತಿದ ಶ್ರೇಷ್ಠ ದಾರ್ಶನಿಕರು ವಿದ್ಯಾರ್ಥಿಗಳು ಕನಕದಾಸರ ಮೌಲ್ಯಯುತ ಕೃತಿಗಳನ್ನು ಓದಿ ಉತ್ತಮವಾದ ಬದುಕು ಕಟ್ಟಿಕೊಳ್ಳಿ ಎಂದು ಜೇವರ್ಗಿಯ ನರೇಂದ್ರ ಪದವಿ ಪೂರ್ವ ಕಾಲೇಜನ ಕನ್ನಡ ಉಪನ್ಯಾಸಕ ಮಾಳಪ್ಪ ದೇಸಾಯಿ ಹೇಳಿದರು.

ಮುಖ್ಯ ಅತಿಥಿ, ಯುವ ಸಾಹಿತಿ ಡಾ.ಮಲ್ಲಿಕಾರ್ಜುನ ಆಲಮೇಲ ಮಾತನಾಡಿ, ಕನಕದಾಸರು ಸರ್ವಧರ್ಮ ಮತ್ತು ಜಾತಿ ಸಮಾನತೆಯನ್ನು ಪ್ರತಿಪಾದಿಸುತ್ತಾ ಕುಲಕುಲವೆಂದು ಹೊಡೆದಾಡದಿರಿ ಎಂಬ ಕೀರ್ತನೆಯನ್ನು ಜಗತ್ಪ್ರಸಿದ್ಧಗೊಳಿಸಿದ ಮಹಾನ್ ಶ್ರೇಷ್ಠ ಸಂತ ಎಂದು ಬಣ್ಣಿಸಿದರು.

ಕದಂಬ ಪಿ ಯು ಕಾಲೇಜಿನ ಪ್ರಾಂಶುಪಾಲರಾದ ದೇವೇಂದ್ರ ಗುಡೂರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿ, ಅಂತರಂಗ ಶುದ್ಧಿಗೊಳಿಸಿ ಭಗವಂತನಿಗೆ ಶರಣಾಗುವುದು ಕನಕದಾಸರ ಮುಖ್ಯ ಧ್ಯೇಯ ಮತ್ತು ಉದ್ದೇಶವಾಗಿತ್ತು ಅದರಿಂದ ಅವರ ತತ್ವ ಮತ್ತು ಸತ್ವ ಪ್ರತಿಯೊಬ್ಬರು ಅರ್ಥೈಸಿಕೊಳ್ಳುವುದು ಅವಶ್ಯಕತೆ ಇದೆ ಎಂದು ನುಡಿದರು.

ವೇದಿಕೆ ಮೇಲೆ ಕಲಬುರ್ಗಿಯ ದೂರದರ್ಶನ ಕೇಂದ್ರದ ವರದಿಗಾರರಾದ ಮನೋಹರ್ ಪೂಜಾ–ರಿ,ಉಪನ್ಯಾಸಕಿ ಭಾಗ್ಯ ಸೇರಿದಂತೆ ಇನ್ನಿತರರು ಉಪಸ್ಥಿತ–ರಿದ್ದರು. ಕು.ಐಶ್ವರ್ಯ ಪ್ರಾರ್ಥಿಸಿದರು, ಕಾಶಿನಾಥ್ ಸ್ವಾಗತಿಸಿದರು. ಕಲಾಣಿಕೇತನ ಟ್ರಸ್ಟ್ ಅಧ್ಯಕ್ಷ ಬಸವರಾಜ ಶಿಣ್ಣೂರ ಪ್ರಾಥಮಿಕ ನುಡಿಗಳಾಡಿದರು, ಇಬ್ರಾಹಿಂ ನಿರೂಪಿಸಿ ವಂದಿಸಿದರು.

# ಮಾತಾಪಿತರಲ್ಲಿ ಶೋಕದ ಕಣ್ಣೀರು ತರಿಸದಿರಿ : ಶಿವಶಾಂತವೀರಶ್ರೀ

■ **ಉದಯರಶ್ಮಿ ದಿನಪತ್ರಿಕೆ**



ತಾಳಿಕೋಟೆ, ಮಕ್ಕಳಿಗೆ ಚಿಕ್ಕವ–ರಿರುವಾಗಲೇ ಒಳ್ಳೆಯ ಸಂಸ್ಕಾರ ಕಲಿಸಿ ಸಂಸ್ಕಾರವಂತರನ್ನಾಗಿ ರೂಪಿಸಿದರೆ ಅವರ ಜೀವನದಲ್ಲಿ ಬೇಕಾದದ್ದನ್ನು ಸಾಧಿಸಬಹುದಾಗಿದೆ ಎಂದು ಬಿಸರಳ್ಳಿಯ ಗವಿಸಿದ್ದೇಶ್ವರ ಶಾಖಾಮಠದ ಶಿವಶಾಂತವೀರ ಮಹಾಸ್ವಾಮಿಗಳು ನುಡಿದರು.

ರವಿವಾರರಂದು ಶ್ರೀ ಗ್ರಾಮದೇವತಾ ಜಾತ್ರೋತ್ಸವ ಅಂಗವಾಗಿ ರಾಜವಾಡೆಯಲ್ಲಿ ಏರ್ಪಡಿಸಲಾದ ಧರ್ಮಸಭೆಯ ಸಾನಿದ್ಯ ವಹಿಸಿ ಮಾತನಾಡುತ್ತಿದ್ದ ಶ್ರೀಗಳು, ಮಕ್ಕಳಲ್ಲಿ ಒಳ್ಳೆಯ ಜ್ಞಾನ ಬೆಳೆಯುವಂತೆ ಪಾಲಕರು ಎಚ್ಚರ ವಹಿಸಬೇಕು. ನಮ್ಮ ಸಂಸ್ಕೃತಿಯನ್ನು ಅರಿತ ವಿದೇಶಿಗರು ನಮ್ಮ ದೇಶಕ್ಕೆ ಬಂದಾಗ ಕಾಲಲ್ಲಿಯ ಚಪ್ಪಲ ಬಿಟ್ಟು ಭೂತಾಯಿಗೆ ನಮಿಸಿ ಬರುವಂತಹ ಕಾರ್ಯ ನಡೆದಿದೆ. ನಮ್ಮ ಭಾರತೀಯ ಸಂಸ್ಕೃತಿಯೆಂಬುದನ್ನು ಇಲ್ಲಿಯ ಜ್ಞಾನವನ್ನೇ ಉಸಿರಾಗಿಸಿಕೊಂಡು ಬದುಕುವವರೇ ನಿಜವಾದ ಭಾರತೀಯರೆಂದರು.

ಶ್ರೀ ಖಾಸ್ಗತೇಶ್ವರ ಮಠದ ಪೀಠಾದಿಪತಿ ಬಾಲಶಿವಯೋಗಿ ಸಿದ್ದಲಿಂಗದೇವರು ಮಾತನಾಡಿ, ಮಳೆಯಾಗಮನದಿಂದ ರೈತರ ಮೊಗದಲ್ಲಿ ಹರ್ಷ ಮೂಡಲಿದೆ. ರೈತರ ಖುಷಿ ಮುಂದೆ ನಮ್ಮ ಖುಷಿ ಇಲ್ಲ. ರೈತ ಇಲ್ಲದಿದ್ದರೆ ಮಣ್ಣು ತಿನ್ನುವ ಪರಿಸ್ಥಿತಿ, ಅದರಂತೆ ಸೈನಿಕ ಇಲ್ಲದಿದ್ದರೆ ದೇಶದ ರಕ್ಷಣೆಯಾಗಲು ಸಾಧ್ಯವಿಲ್ಲ ಎಂದರು.

ವೇದಿಕೆಯ ಮೇಲೆ ಜಿ.ಪಂ. ಮಾಜಿ ಅಧ್ಯಕ್ಷ ಪ್ರಭುಗೌಡ ದೇಸಾಯಿ, ಜಿಲ್ಲಾ ಭಾಜಪ ಮಾಜಿ ಅಧ್ಯಕ್ಷ ಆರ್.ಎಸ್. ಪಾಟೀಲ(ಕೂಚಬಾಳ), ಮುತ್ತುಗೌಡ ಪಾಟೀಲ, ಶರಣು ಗೊಟಗುಣಕಿ, ಪುರಸಭಾ ಮಾಜಿ ಅಧ್ಯಕ್ಷ ಬಾಪುಗೌಡ ಪಾಟೀಲ, ದುಂಡಪ್ಪಗೌಡ ಪಾಟೀಲ, ಗುರುಸಂಗಪ್ಪ ಕಶೆಟ್ಟಿ, ಅಣ್ಣಪ್ಪ ಜಗತಾಪ, ಶಂಕರಗೌಡ ಪಾಟೀಲ, ಮಲ್ಲನಗೌಡ ಹಿರೇಗೌಡರ, ಸುರೇಶ ಪಾಟೀಲ ಮೊದಲಾದವರು ಉಪಸ್ಥಿತರಿದ್ದರು.

ಇದೇ ಸಮಯದಲ್ಲಿ ಅತಿಥಿ ಮಹೋದಯರಿಗೆ ಹಾಗೂ ದಾನಿಗಳಾದ ನಿವೃತ್ತ ಎಸ್.ಪಿ. ಕಟ್ಟಿಮನಿ, ಬಾಪುಗೌಡ ಬಿರಾದಾರ, ನಿರಂಜನಶಾ ಮಕಾಂದಾರ, ಪ್ರಭುಗೌಡ ಮದರಕಲ್ಲ, ಘನಶ್ಯಾಮ ಚವ್ಹಾಣ, ನಾರಾಯಣ ಗಾಯಕವಾಡ, ವಿಠ್ಠಲ ಶೇವಳಕರ, ಕಾಶೀನಾಥ ಹಿರೇಮಠ, ರಮೇಶ ಕಟ್ಟಿಮನಿ, ಆನಂದ ಮದರಕಲ್ಲ, ವಿಜುಗೌಡ ಪಾಟೀಲ(ಸಾಲವಾಡಗಿ), ಶಿವಾನಂದ ಹೂಗಾರ, ಮಲ್ಲನಗೌಡ ಪಾಟೀಲ, ಮೊದಲಾದವರಿಗೆ ಸನ್ಮಾನಿಸಿ ನೆನಪಿನ ಕಾಣಿಕೆ ನೀಡಿ ಗೌರವಿಸಲಾಯಿತು.

ಕುಮಾರಿ ತೇಜಸ್ವಿನಿ ಡಿಸಲೆ ಸ್ವಾಗತಿಸಿ ನಿರೂಪಿಸಿ ವಂದಿಸಿದರು.

**Printed by:** AVINASH BIDARI, **Published and owned by:** SHAILA INDUSHEKHAR MANUR **Printed at:** ARUN OFFSET PRINTERS,No.23, Sanjaygandhi Nagar, Indi Road, Vijayapura - 586101, Vijayapura Dist., Karnataka. **Published at:** At No.14, Silk City, Near Varasiddi Vinayaka Temple, Atalatti Link Road, Vijayapura -586102, Vijayapura Dist., Karnataka..**Editor :** INDUSHEKHAR MANUR